ಕಲ್ಯಾಣ ಕರ್ನಾಟಕದ ಪ್ರತಿಬಿಂಬ......
ವಿಜಯನಗರ ಜಿಲ್ಲಾ ಆವೃತ್ತಿ

# ವಾರ್ತಾ ಲೋಕ

"VARTHA LOKA" Kannada Daily Morning News Paper, VIJAYNAGAR. Dist.: Vijaynagar
ಕನ್ನಡ ದಿನಪತ್ರಿಕೆ
ಕೊಪ್ಪಳ । ರಾಯಚೂರು । ಬಳ್ಳಾರಿ । ವಿಜಯನಗರ । ಯಾದಗಿರಿ । ಬೆಂಗಳೂರು । ಬೀದರ ಹಾಗೂ ಕಲಬುರ್ಗಿ ಜಿಲ್ಲೆಯಲ್ಲಿ ಏಕಕಾಲಕ್ಕೆ ಪ್ರಕಾಶಿತ

ಸಂಪಾದಕರು: ಎಸ್. ವಿ. ಕುಲಕರ್ಣಿ ಜಿ.
ಸ್ಥಾನಿಕ ಸಂಪಾದಕರು: ಮೊಹಮ್ಮದ ಜಿಲಾನ ಜಿ.

ವಾರ್ತಾ ಲೋಕ
ಕನ್ನಡ ದಿನ ಪತ್ರಿಕೆ ಕಛೇರಿ
ರಾಜಾಸಾಬ ಕಂಪೌಂಡ್,
ಕುಲಾಯಪ್ಪ ಬಿಲ್ಡಿಂಗ್
ಎದುರುಗಡೆ, 1ನೇ ಕ್ರಾಸ್
ಪಟೇಲ್ ನಗರ,
ಹೊಸಪೇಟೆ
ಮೊ.ನಂ : 9482156289

E-mail ID : varthalokahpt@gmail.com

VOLUME : 01 | ISSUE : 282 | Wednesday 02-04-2025 | RNI No.: KARKAN/2010/47633 | Page : 4+II | Mob. No. : 9482156289 | Price : ₹3/-

# Waqf bill ಮಂಡನೆ: ಮುಂದಿನ 3 ದಿನ ಲೋಕಸಭೆಗೆ ಗೈರಾಗದಂತೆ ಸಂಸದರಿಗೆ ಕಾಂಗ್ರೆಸ್ ವಿಪ್ ಜಾರಿ!

**ನವದೆಹಲಿ :** ಕೇಂದ್ರ ಸರ್ಕಾರವು ವಕ್ಫ್ ಮಸೂದೆ ತಿದ್ದುಪಡಿಗಳನ್ನು ಲೋಕಸಭೆಯಲ್ಲಿ ಮಂಡಿಸಲು ಮುಂದಾಗಿದ್ದು ಇದರ ನಡುವೆ ಕಾಂಗ್ರೆಸ್ ಇಂದು ಲೋಕಸಭೆಯಲ್ಲಿನ ತನ್ನ ಎಲ್ಲಾ ಸಂಸದರಿಗೆ ವಿಪ್ ಜಾರಿ ಮಾಡಿದೆ. ಮುಂದಿನ ಮೂರು ದಿನಗಳವರೆಗೆ ಕಾಂಗ್ರೆಸ್ ಸಂಸದರು ಸದನಕ್ಕೆ ಗೈರಾಗದಂತೆ ಎಚ್ಚರಿಸಿದೆ ಎಂದು ಮೂಲಗಳು ತಿಳಿಸಿವೆ.

ವಿವಾದಾತ್ಮಕ ವಕ್ಫ್ (ತಿದ್ದುಪಡಿ) ಮಸೂದೆಯನ್ನುನಾಳೆಲೋಕಸಭೆಯಲ್ಲಿಚರ್ಚೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳಲಾಗುತ್ತದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದ ನಂತರ ಕಾಂಗ್ರೆಸ್ ಪಕ್ಷವು ವಿಪ್ ಜಾರಿ ಮಾಡಿದೆ. ಈ ಸಂಬಂಧ ವಿರೋಧ ಪಕ್ಷಗಳು ದೊಡ್ಡ ಸಭೆ ನಡೆಸಿದ್ದು,ವಕ್ಫ್‌ಮಸೂದೆಯಲ್ಲಿಸರ್ಕಾರವನ್ನು ಹೇಗೆ ಎದುರಿಸುವುದು ಎಂಬುದರ ಕುರಿತು ಕಾರ್ಯತಂತ್ರ ರೂಪಿಸಲಾಗಿದೆ.

ಬುಧವಾರ, ಗುರುವಾರ ಮತ್ತು ಶುಕ್ರವಾರ ಅಂದರೆ ಏಪ್ರಿಲ್ 2, 3 ಮತ್ತು 4, 2025ರಂದು ಲೋಕಸಭೆಯಲ್ಲಿ ಬಹಳ ಮುಖ್ಯವಾದ ವಿಷಯಗಳನ್ನು ಚರ್ಚೆಗೆ ತೆಗೆದುಕೊಳ್ಳಲಾಗುವುದು.

ಲೋಕಸಭೆಯಲ್ಲಿರುವ ಕಾಂಗ್ರೆಸ್ ಪಕ್ಷದ ಎಲ್ಲಾ ಸದಸ್ಯರು ಈ ಮೂವರು ದಿನವೂ ಬೆಳಿಗ್ಗೆ 11 ಗಂಟೆಯಿಂದ ಸದನದಲ್ಲಿ ಹಾಜರಿದ್ದು ಪಕ್ಷದ ನಿಲುವನ್ನುಬೆಂಬಲಿಸುವಂತೆವಿನಂತಿಸಲಾಗಿದೆ ಎಂದು ಲೋಕಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖ್ಯ ಸಚೇತಕ ಕೆ. ಸುರೇಶ್ ಹೊರಡಿಸಿದ ವಿಪ್‌ನಲ್ಲಿ ತಿಳಿಸಿದ್ದಾರೆ.

ಈ ಮಸೂದೆ ಜಾರಿಗೆ ತರಲು ದೃಢನಿಶ್ಚಯ ಮಾಡಿರುವ ಬಿಜೆಪಿ ನೇತೃತ್ವದ ಓಆಂ ಸರ್ಕಾರ ಮತ್ತು ಪ್ರಸ್ತಾವಿತ ಕಾಯ್ದೆಯನ್ನು ಅಸಂವಿಧಾನಿಕ ಎಂದು ಖಂಡಿಸುವಲ್ಲಿ ಒಗ್ಗಟ್ಟಿನ ವಿರೋಧ ಪಕ್ಷದ ನಡುವೆ ಪ್ರಮುಖ



ಘರ್ಷಣೆಗೆ ವೇದಿಕೆ ಸಿದ್ಧಪಡಿಸಿದಂತಿದೆ. ಸ್ಪೀಕರ್ ಓಂ ಬಿರ್ಲಾ ಅಧ್ಯಕ್ಷತೆಯಲ್ಲಿ ಎಲ್ಲಾ ಪ್ರಮುಖ ಪಕ್ಷಗಳ ನಾಯಕರನ್ನು ಒಳಗೊಂಡ ಲೋಕಸಭೆಯ ವ್ಯವಹಾರ ಸಲಹಾ ಸಮಿತಿ (ಬಿಎಸಿ) ಎಂಟು ಗಂಟೆಗಳ ಚರ್ಚೆಗೆ ಒಪ್ಪಿಗೆ ನೀಡಿದೆ ಎಂದು ಅಲ್ಪಸಂಖ್ಯಾತರು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಸುದ್ದಿಗಾರರಿಗೆ ತಿಳಿಸಿದರು.

ಚರ್ಚೆಯ ಸಮಯದಲ್ಲಿ ಲೋಕಸಭೆಯಲ್ಲಿ ಭಾರಿ ಕೋಲಾಹಲ ಉಂಟಾಗುವ ಸಾಧ್ಯತೆಯಿದೆ. ಏಕೆಂದರೆ ವಿರೋಧ ಪಕ್ಷಗಳು ಇದನ್ನು ಬಲವಾಗಿ ವಿರೋಧಿಸುತ್ತಿವೆ ಮತ್ತು ಇದನ್ನು ಸಂವಿಧಾನಬಾಹಿರ ಮತ್ತು ಮುಸ್ಲಿಂ ಸಮುದಾಯದ ಹಿತಾಸಕ್ತಿಗಳಿಗೆ ವಿರುದ್ಧವೆಂದು ಕರೆಯುತ್ತಿವೆ. ವಕ್ಫ್ ತಿದ್ದುಪಡಿ ಮಸೂದೆಯ ಬಗ್ಗೆ ವಿರೋಧ ಪಕ್ಷಗಳು ಆರಂಭದಿಂದಲೂ ಭಿನ್ನಾಭಿಪ್ರಾಯ ವ್ಯಕ್ತಪಡಿಸುತ್ತಿವೆ.

ಈ ಮಸೂದೆ ಅಲ್ಪಸಂಖ್ಯಾತ ಸಮುದಾಯದ ಹಕ್ಕುಗಳ ಮೇಲೆ ಪರಿಣಾಮ ಬೀರಬಹುದು ಎಂದು ವಿಪಕ್ಷಗಳು ಹೇಳುತ್ತಿದ್ದಾರೆ. ಅದೇ ಸಮಯದಲ್ಲಿ, ವಕ್ಫ್ ಆಸ್ತಿಗಳ ನಿರ್ವಹಣೆಯಲ್ಲಿ ಪಾರದರ್ಶಕತೆ ತರಲು ಮತ್ತು ದುರುಪಯೋಗವನ್ನು ತಡೆಯಲು ಈ ತಿದ್ದುಪಡಿ ಅಗತ್ಯ ಎಂದು ಸರ್ಕಾರ ಹೇಳಿಕೊಂಡಿದೆ.

**ಬಿಜೆಪಿ ತನ್ನ ಸಂಸದರಿಗೆ ವಿಪ್ ಜಾರಿ**

ಲೋಕಸಭೆಯಲ್ಲಿ ಭಾರತೀಯ ಜನತಾ ಪಕ್ಷದ (ಬಿಜೆಪಿ) ಮುಖ್ಯ ಸಚೇತಕ ಸಂ–ಜಯ್ ಜೈಸ್ವಾಲ್ ಅವರು, ಏಪ್ರಿಲ್ 2ರ ಬುಧವಾರದಂದು ಎಲ್ಲಾ ಲೋಕಸಭಾ ಸಂಸದರು ಸದನದಲ್ಲಿ ಕಡ್ಡಾಯವಾಗಿ ಹಾಜ–ರಿರಬೇಕು ಎಂದು ನಿರ್ದೇಶನ ನೀಡಿ ವಿಪ್ ಜಾರಿ ಮಾಡಿದ್ದಾರೆ. ಬುಧವಾರ ಲೋಕಸಭೆಯಲ್ಲಿ ಕೆಲವು ಪ್ರಮುಖ ಶಾಸಕಾಂಗ ಕಾರ್ಯಗಳು ಅಂಗೀಕಾರವಾಗಲಿದ್ದು, ಇದಕ್ಕಾಗಿ ಪಕ್ಷದ ಎಲ್ಲಾ ಸಂಸದರ ಉಪಸ್ಥಿತಿ ಕಡ್ಡಾಯವಾಗಿದೆ ಎಂದು ಬಿಜೆಪಿ ಹೇಳಿದೆ. ಪಕ್ಷವು ತನ್ನ ಸಂಸದರು ಸದನದಲ್ಲಿ ಹಾಜರಿರಬೇಕು ಮತ್ತು ಸರ್ಕಾರದ ಪರವಾಗಿ ಬೆಂಬಲ ನೀಡಬೇಕು ಮತ್ತು ಶಾಸಕಾಂಗ ಪ್ರಕ್ರಿಯೆಯನ್ನು ಸುಗಮವಾಗಿ ಪೂರ್ಣಗೊಳಿಸಲು ಸಹಕರಿಸಬೇಕು ಎಂದು ಸೂಚನೆ ನೀಡಿದೆ.

## ವಿಜಯನಗರದಲ್ಲಿ ಸಂಭ್ರಮದ ರಂಜಾನ್ ಹಬ್ಬ ಆಚರಣೆ

● ವಾರ್ತಾಲೋಕ ವಾರ್ತೆ

**ಹೊಸಪೇಟೆ: ಏಪ್ರಿಲ್ 1 :** ಹೊಸಪೇಟೆ ನಗರದಲ್ಲಿ ಸೋಮವಾರ ರಂಜಾನ್ ಹಬ್ಬವು ಬಹಳ ಸಡಗರ ಸಂಭ್ರಮದಿಂದ ಆಚರಣೆ ಮಾಡಿದ್ದು, ವಿವಿಧ ಪ್ರದೇಶಗಳಿಂದ ಆಗಮಿಸಿದ ಸಾವಿರಾರು ಮುಸ್ಲಿಂ ಬಾಂದವರು ಅಂಬೇಡ್ಕರ್ ಸರ್ಕಲ್ ಹತ್ತಿರದ ಈದ್ಗಾ ಮೈದಾನದಲ್ಲಿ ಸೇರಿ ಪ್ರಾರ್ಥನೆಯನ್ನು ಸಲ್ಲಿಸಿದರು. ನಂತರ ಪರಸ್ಪರ ಅಲಂಗಿಸುವ ಮೂಲಕ ಹಬ್ಬದ ಶುಭಾಶಗಳನ್ನು ತಿಳಿಸಿದರು, ಈ ಸಂದರ್ಭದಲ್ಲಿ ಹುಡಾ ಅಧ್ಯಕ್ಷ ಎಚ್.ಎನ್. ಮಹಮ್ಮದ ಇಮಾಮ್ ನಿಯಾಜಿ ಎಮ್.ಎಮ್. ಫೈರೋಜ್ ಖಾನ್, ಅಬೂಬಕ್ಕರ್ ಅಶ್ರಫಿ,ಅನ್ಸರ್ ಭಾಷ, ಡಾ॥ ದುರ್ವೆಶ್ ಮೈನುದ್ದೀನ್,ಸದ್ದಮ್ ಹುಸೇನ್, ಮೊಹಮ್ಮದ್ ಮೋಸಿನ್,ಗುಲಾಮ್ ರಸೂಲ್,ಹಾಗೂ ನಗರಸಭಾ ಸದಸ್ಯರಾದ ಖದೀರ,ಖಲಂದರ್,ಗೌಸ್,ಸಮಾಜದ ಹಿರಿಯ ಮುಖಂಡರು ಹಾಗು ಸಾವಿರಾರು ಮುಸ್ಲಿಂ ಭಾಂದವರು ಭಾಗವಹಿಸಿದರು.

**ವರದಿ ಅಂಬರೀಶ್ ನಾಯಕ್**





## ಪ್ರಕಟಿತ ಪುಸ್ತಕಗಳನ್ನು ಬೆಳಕಿಗೆ ತರುವ ಕೆಲಸವಾಗಬೇಕು: ಎಚ್.ಆರ್. ಗವಿಯಪ್ಪ

● ವಾರ್ತಾಲೋಕ ವಾರ್ತೆ

**ಹೊಸಪೇಟೆ : ಏಪ್ರಿಲ್ 1 :** ಕನ್ನಡ ವಿಶ್ವವಿದ್ಯಾಲಯ ತನ್ನ 33ನೇ ನುಡಿಹಬ್ಬದ ಪ್ರಯುಕ್ತ ಕಲೆ, ಸಾಹಿತ್ಯ, ಇತಿಹಾಸ, ವಿಜ್ಞಾನ ಮತ್ತು ಆರೋಗ್ಯ ಸೇರಿದಂತೆ ವಿವಿಧ ಬಗೆಯ 60 ಪುಸ್ತಕಗಳನ್ನು ಪ್ರಕಟಿಸಿರುವುದು ಉತ್ತಮವಾದ ಕಾರ್ಯ. ಪುಸ್ತಕಗಳನ್ನು ಪ್ರಕಟಿಸಿದರಷ್ಟೇ ಸಾಲದು ಅವುಗಳನ್ನು ಬೆಳಕಿಗೆ ತರುವ ಕೆಲಸವು ಆಗಬೇಕು ಎಂದು ಶಾಸಕ ಹೆಚ್ ಆರ್ ಗವಿಯಪ್ಪ ಹೇಳಿದರು.

ವಿಶ್ವವಿದ್ಯಾಲಯವು ಇದುವರೆಗೂ ಪ್ರಕಟಿಸಿರುವ ಪುಸ್ತಕಗಳನ್ನು ಡಿಜಿಟಲೈಜೇಶನ್ ಮಾಡುವ ಕಾರ್ಯಕ್ಕೆ ಮುಂದಾಗಬೇಕು. ಇದರಿಂದ ಕನ್ನಡದ ಜ್ಞಾನವನ್ನು ಅನಾವರಣಗೊಳಿಸಲು ಸಾಧ್ಯವಾಗುತ್ತದೆಅವರುಅಭಿಪ್ರಾಯಪಟ್ಟರು.

ಇಲ್ಲಿನ ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ 33ನೇ ನುಡಿಹಬ್ಬ ಪ್ರಯುಕ್ತ ಪ್ರಸಾರಾಂಗ ಹಮ್ಮಿಕೊಂಡಿದ್ದ ಪುಸ್ತಕ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ, ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿ ಕನ್ನಡ ವಿಶ್ವವಿದ್ಯಾಲಯ ಒಂದು ಐಕಾನಿಕ್ ವಿಶ್ವವಿದ್ಯಾಲಯ. ಈ ವಿಶ್ವವಿದ್ಯಾಲಯಕ್ಕೆ ಬೇಕಾದ ಸಹಕಾರವನ್ನು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕೊಡುಸುವೆ ಎಂದು ಭರವಸೆ ನೀಡಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ ಮಾತನಾಡಿ




ಭಾರತದ ಬೇರಾವ ವಿಶ್ವವಿದ್ಯಾಲಯದಲ್ಲೂ ಇಲ್ಲದ ಸಂಶೋಧನಾ ಕಳಕಳಿ ಕನ್ನಡ ವಿಶ್ವವಿದ್ಯಾಲಯದಲ್ಲಿದೆ. ಇಲ್ಲಿನ ಪ್ರತಿಯೊಬ್ಬರು, ಗಿಡಮರಗಳು ಸಹಸಂಶೋಧನೆಯನ್ನೇ ಧ್ಯಾನಿಸುತ್ತವೆ. ಕನ್ನಡ ವಿಶ್ವವಿದ್ಯಾಲಯ ಬೇರೆ ಹಳೆಯ ವಿಶ್ವವಿದ್ಯಾಲಯಗಳಿಗೆ ಸರಿಸಾಟಿಯಾಗಿ 1650ಕ್ಕೂ ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿದೆ. ಸರ್ಕಾರದ ಅನುದಾನದ ಕೊರತೆಯ ನಡುವೆ ಸಂಶೋಧನೆ ನಿರಂತರವಾಗಿ ನಡೆಯುತ್ತಿದೆ. ಉತ್ತಮವಾದ ಪುಸ್ತಕಗಳು,ಚಿಂತಕರ ಆಲೋಚನೆಗಳು ಪುಸ್ತಕದ ರೂಪದಲ್ಲಿ ಓದುಗರ ಕೈ ಸೇರಬೇಕು ಎಂದು ಅತ್ಯಂತ ಕಡಿಮೆ ಬೆಲೆಗೆ ಪ್ರಸಾರಂಗ ಪುಸ್ತಕಗಳನ್ನು ಪ್ರಕಟಿಸುತ್ತದೆ ಎಂದು ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ವಿಜಯ್ ಪೂಣ್ಣಚ್ಚ ತಂಬಂಡ ಪ್ರಾಸ್ತಾವಿಕವಾಗಿ ಮಾತನಾಡುತ್ತ ಸಂಶೋಧನೆ ಮತ್ತು ಪ್ರಕಟಣೆ ಎನ್ನುವುದು ವಿಶ್ವವಿದ್ಯಾಲಯದ ಜೀವಾಳ. ವಿಶ್ವವಿದ್ಯಾಲಯ ಇದುವರೆಗೂ 1650 ಪುಸ್ತಕಗಳನ್ನು ಪ್ರಕಟಿಸಿದೆ.

ಈ ಬಾರಿ ಹೆಚ್ಚು ಪುಸ್ತಕಗಳು ಮಾರಾಟವಾಗಿವೆ. ನಾಡಿನ ಎಲ್ಲೆಡೆ ವಿಶ್ವವಿದ್ಯಾಲಯದ ಜ್ಞಾನವನ್ನು ತಲುಪಿಸುವ ಕೆಲಸ ನಡೆಯುತ್ತಿದೆ.

ಪ್ರಸಾರಾಂಗವು ಸಾಮಾಜಿಕ, ರಾಜಕೀಯ, ಸಾಹಿತ್ಯ, ಚರಿತ್ರೆ, ವಿಜ್ಞಾನ ಹೀಗೆ ಎಲ್ಲ ಪ್ರಕಾರದ ಪುಸ್ತಕಗಳನ್ನು ಪ್ರಕಟಿಸಿಕೊಂಡು ಬಂದಿದೆ. ಪ್ರಸಾರಾಂಗದ ಹೊಸ ಕಟ್ಟಡ ನಿರ್ಮಾಣ ಶೇ.80 ರಷ್ಟು ಪೂರ್ಣಗೊಂಡಿದ್ದು, ಶೇ.20ರಷ್ಟು ಬಾಕಿ ಇದೆ. ಕೆಕೆಆರ್‌ಡಿಬಿ ಯಿಂದ ಅನುದಾನ ಬಿಡುಗಡೆಯಾದರೆ ಉಳಿದ ಕಾರ್ಯವನ್ನು ಪೂರ್ಣಗೊಳಿಸುತ್ತೇವೆ ಎಂದರು.

ಈ ಕಾರ್ಯಕ್ರಮದಲ್ಲಿ ಸಾಹಿತಿಗಳು, ಪುಸ್ತಕ ಪ್ರಕಟಿಸಿದ ಲೇಖಕರು, ವಿವಿಧ ನಿಕಾಯಗಳ ದೀನರು, ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ಸಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಂಗೀತ ಮತ್ತು ನೃತ್ಯ ವಿಭಾಗದ ವಿದ್ಯಾರ್ಥಿಗಳು ಇದ್ದರು.

**ವರದಿ ಎ ಚಿದಾನಂದ**

## ಇಂದಿನ ಮಕ್ಕಳಿಗೆ ವಿದ್ಯೆ ಜೊತೆಗೆ ಸಂಸ್ಕಾರವೂ ಕಲಿಸುವ ಅಗತ್ಯವಿದೆ: ಹಚ್ಚೊಳ್ಳಿ ಅಮರೇಶ್

● ವಾರ್ತಾಲೋಕ ವಾರ್ತೆ

**ಬಳ್ಳಾರಿ. ಏಪ್ರಿಲ್ 1 :** ಇಂದಿನ ಮಕ್ಕಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರವನ್ನು ಕಲಿಸಬೇಕಾದ ಅವಶ್ಯಕತೆ ಇದೆ ಸಮಾಜದಲ್ಲಿ ಸಂಸ್ಕಾರವಂತರಾಗಿದ್ದಲ್ಲಿ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಈ ನಿಟ್ಟಿನಲ್ಲಿ ಪೋಷಕರು ತಮ್ಮ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಕಲಿಸಬೇಕು ಎಂದು ಸಂಸ್ಕಾರ ಭಾರತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್. ಎಂ ಅಮರೇಶ್ ಪೋಷಕರಿಗೆ ಕರೆ ನೀಡಿದರು.

ಅವರು ನಗರದ ಬ್ಯಾಂಕ್ ಕಾಲೋನಿಯ ಉದ್ಯಾನವನದ ಬಯಲು ರಂಗವೇದಿಕೆಯಲ್ಲಿ ಸಂಸ್ಕಾರ ಭಾರತಿ ಜಿಲ್ಲಾ ಘಟಕವತಿಯಿಂದ

ಯುಗಾದಿ ಹಬ್ಬದ ಪ್ರಯುಕ್ತ ಚೈತ್ರದ ಚಿಗುರು ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಕಾರ್ಯಕ್ರಮದ ಅಂಗವಾಗಿ ಕಾಲೋನಿಯ ಗೃಹಿಣಿಯರಿಗಾಗಿ ಸಂಜೆ ರಂಗೋಲಿ ಸ್ಪರ್ಧೆ ಯನ್ನು ಮಕ್ಕಳಿಗಾಗಿ ಭಾರತೀಯ ಸಾಂಪ್ರದಾಯಿಕ ಉಡುಪು ಪ್ರದರ್ಶನ ಏರ್ಪಡಿಸಲಾಗಿತ್ತು.ಚೈತ್ರದ ಚಿಗುರು ವೇದಿಕೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಕಾರ



ಭಾರತಿ ಜಿಲ್ಲಾ ಘಟಕದ ಅಧ್ಯಕ್ಷರಾದ ಶ್ರೀ ಯಲ್ಲನಗೌಡ ಶಂಕರ ಬಂಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಆರಂಭದಲ್ಲಿ ಕಾರ್ಯಕ್ರಮದ ಪ್ರಾರ್ಥನೆ ಮತ್ತು ಧ್ಯೇಯಗೀತೆಯನ್ನು ಶ್ರೀಮತಿ ಲಕ್ಷ್ಮಿ ಪವನ್ ಕುಮಾರ್ ನೆರವೇರಿಸಿದರು ಅಥಿತಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಅಮರೀಶ ಹಚ್ಚೊಳ್ಳಿ ಪ್ರಧಾನ ಕಾರ್ಯದರ್ಶಿಗಳು ಸಂಸ್ಕಾರ ಭಾರತಿ ಬಳ್ಳಾರಿ ಇವರು ಶ್ರೀಮತಿ ಶಶಿಕಲಾ ಇವರು ಕಾರ್ಯಕ್ರಮ ಉದ್ಘಾಟಿಸಿ ಶುಭ ಹಾರೈಸಿದರು "ಭಾರತದ ಭವ್ಯ ಪರಂಪರೆ ಹಾಗೂ ಯುಗಾದಿ ಹಬ್ಬ " ಕುರಿತಾಗಿ ವಿಶೇಷ ಉಪನ್ಯಾಸ ನೀಡಿದ ಎ.ಎಂ.ಪಿ ವೀರೇಶಸ್ವಾಮಿ ಉಪನ್ಯಾಸಕರು ಇವರು ಮಾತನಾಡುತ್ತಾ ಭಾರತೀಯರು ಆಚರಿಸುವ ಹಬ್ಬಗಳು ಈ ದೇಶದ ಸಂಸ್ಕಾರದ ಅಸ್ಮಿತೆಯಾಗಿದೆ,ಅದರಲ್ಲೂ ಯಗಾದಿ ಭಾರತೀಯರ ಪಾಲಿಗೆ ಹೊಸ ವರ್ಷವಾಗಿದ್ದು ಈ ಸಮಯದಲ್ಲಿ ಭಾರತೀತರಯ ಹೊಸ ಬಟ್ಟೆ ಧರಿಸಿ ದೇವರ ದರ್ಶನ ಪಡೆದು ಬೇವು ಬೆಲ್ಲವನ್ನು ಸವಿಯುವುದು, ಸಾಯಂಕಾಲ ಪಂಚಾಂಗ ಶ್ರವಣ ಬಿದಿಗೆ ಚಂದ್ರದರ್ಶನ ಇವುಗಳೆಲ್ಲವೂ ಈ ಹಬ್ಬದ ವಿಶೇಷತೆಗಳಾಗಿವೆ ಎಂದರು .ಕಾರ್ಯಕ್ರಮದಲ್ಲಿಶ್ರೀಮಹಾಂತಯ್ಯನವರು ಶ್ರೀ ಶಿವೇಶ್ವರ ಗೌಡ ಕಲ್ಲುಕಂಭ ಇವರು ಉಪಸ್ಥಿತರಿದ್ದರು ರಂಗೋಲಿ ಹಾಗೂ ಉಡುಪು ಪ್ರದರ್ಶನದ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಶ್ರೀನಿವಾಸ್ ಜಿ ಉತ್ತರ ಕರ್ನಾಟಕ ಸಂಘಟಕರು ಮತ್ತು ಶ್ರೀ ಕೆ ಎಂ ಸಿದ್ದಲಿಂಗಯ್ಯ ಇವರು ಬಹುಮಾನ ವಿತರಿಸಿದರು ಜಾನಪದ ಕಲಾವಿದರಾದ ಶ್ರೀ ಯಲ್ಲನಗೌಡ ಶಂಕರ ಬಂಡೆ ಹಾಗೂ ಜಡೇಶ್ ಎಮ್ಮಿಗನೂರು ಅವರುಕು ಕು. ವೆಂ ಪು ವಿರಚಿತ ಭಾವಗೀತೆಗಳನ್ನು ಹಾಡಿದರು ಕಾರ್ಯಕ್ರಮದ ಆರಂಭದಲ್ಲಿ ರಂಗೈಕ್ಯರಾದ ಶ್ರೀ ಜೋಯಸ್ ವೆಂಕೋಬಚಾರ್ಯ ಹಾಗೂ ಮೇಕಪ್ಪ ಕಲಾವಿದಶ್ರೀರಾಮಲು ಇವರಿಗೆಶ್ರದ್ಧಾಂಜಲಿ ಅರ್ಪಿಸಿಲಾಯಿತು.ವಿಷ್ಣು ಹಡಪದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು ಈ ಸಂದರ್ಭದಲ್ಲಿ ತೊಗಲುಗೊಂಬೆ ಕಲಾವಿದರಾದ ಹೊನ್ನೂರು ಸ್ವಾಮಿ ನೇತಿ ರಘುರಾಮ್ ಮತ್ತು ಬ್ಯಾಂಕ್ ಕಾಲೋನಿಯ ಸಮಸ್ತ ನಾಗರಿಕರು ಮುದ್ದು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

**ವರದಿ ಎಜಿ ರೆಡ್ಡಿ**

## ಶಿಕ್ಷಣಾಧಿಕಾರಿ ಎಂ. ಚನ್ನಬಸಪ್ಪನವರ ನಿವೃತ್ತಿ ಬಿಳ್ಕೊಡುಗೆ ಸಮಾರಂಭ: ಶಾಸಕ ಗವಿಯಪ್ಪರಿಂದ ಸನ್ಮಾನ

● ವಾರ್ತಾಲೋಕ ವಾರ್ತೆ

**ಹೊಸಪೇಟೆ : ಏಪ್ರಿಲ್ 1 :** ಕಳೆದ 2 ವರ್ಷಗಳಲ್ಲಿ ಬಿಇಒ ಚೆನ್ನಬಸಪ್ಪನವರನ್ನು ಹತ್ತಿರದಿಂದ ನೋಡಿದ್ದೇನೆ. ಅವರ ಸರಳ ವ್ಯಕ್ತಿತ್ವ, ಕೆಲಸದಲ್ಲಿ ಇರುವ ಬದ್ಧತೆ, ಏನೇ ಹೇಳಲಿ ತಕ್ಷಣ ಸ್ಪಂದಿಸುವ ಮನೋಭಾವ ಅವರದ್ದು. ಶಿಕ್ಷಣ ಇಲಾಖೆಯಲ್ಲಿ ಈ 2 ವರ್ಷದಲ್ಲಿ ನಮ್ಮ ಗುರಿ ಮುಟ್ಟುತ್ತೇವೋ ಇಲ್ಲವೋ ಅಂದುಕೊಂಡಿದ್ದೆ.ಆದರೆಗುರಿಸಾಧಿಸಿದೆವು.ಅವರನ್ನು ಬಿಟ್ಟು ಕೊಡಲು ಮನಸ್ಸು ಬರುತ್ತಿಲ್ಲ. ಇನ್ನು ಮುಂದೆ ಅವರು ನಿವೃತ್ತಿಯಾದರೂ ಅವರ ಸಲಹೆ ಸೂಚನೆ ಪಡೆಯುತ್ತೇವೆ ಎಂದು ಶಾಸಕ ಎಚ್.ಆರ್.ಗವಿಯಪ್ಪ ಹೇಳಿದರು.




ನಗರದ ಖಾಸಗಿ ಹೋಟೆಲ್ ನಲ್ಲಿ ನಡೆದ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಚೆನ್ನಬಸಪ್ಪನವರ ವಯೋ ನಿವೃತ್ತಿ ಕಾರ್ಯಕ್ರಮದಲ್ಲಿ ಅವರನ್ನು ಸನ್ಮಾನಿಸಿ ಮಾತನಾಡಿದರು.

ಎಂ.ಚೆನ್ನಬಸಪ್ಪನವರು ಒಂದೆಡೆ ನಿವೃತ್ತಿಯಾದ ಖುಷಿಯಾದರೆ, ಇನ್ನೊಂದೆಡೆ ಇಂಥ ಒಬ್ಬ ಒಳ್ಳೆಯ ಅಧಿಕಾರಿಯನ್ನು ಕಳೆದುಕೊಳ್ಳುತ್ತಿದ್ದೇವಲ್ಲಾ ಎಂಬ ಚಿಂತೆಯಾಗುತ್ತಿದೆ. ಇಲಾಖೆಯಲ್ಲಿ ಇಂಥ ದಕ್ಷ ಅಧಿಕಾರಿಗಳು ಇದ್ದರೆ ಯಾವುದೇ ಸಮಸ್ಯೆಯನ್ನು ಪರಿಹರಿಸಲು ಸಾಧ್ಯವಾಗುತ್ತದೆ. ಅವರು ನಿವೃತ್ತಿಯಾದರು ಅವರನ್ನು ನಾವು ಬಿಡಂಗಿಲ್ಲ. ಅವರ ಸಲಹೆ ಸೂಚನೆಯನ್ನು ಮುಂದೆಯೂ ಪಡೆಯುತ್ತೇವೆ ಎಂದರು.

ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಮಾತನಾಡಿ, ಸಹಜವಾಗಿ ಎಲ್ಲರೂ ನಿವೃತ್ತಿಯಾಗುತ್ತೇವೆ. ಆದರೆ ಹೇಗೆ ಆಗುತ್ತೇವೆ ಎನ್ನುವುದು ಮುಖ್ಯ. ಇವರ ಸರಳ ಸಜ್ಜನಿಕೆಯ ಗುಣ, ಪರಿಶ್ರಮ ಗುರುತಿಸಿ ಇಷ್ಟೊಂದು ಸಂಖ್ಯೆಯಲ್ಲಿ ಜನ ಸೇರಿರುವುದನ್ನು ನೋಡಿದರೆ ಅವರ ಜನಪ್ರಿಯತೆ ಎಷ್ಟಿದೆ ಅಂತ ಖುಷಿಯಾಗುತ್ತಿದೆ. ಬೈಲುವದ್ದಿಗೇರಿ ಯಲ್ಲಿ ಶಾಲೆ ದೇವಸ್ಥಾನದಲ್ಲಿ ನಡೆಯುತ್ತಿದ್ದಾಗ ಊರ ಜನರ ಮನವೊಲಿಸಿ ಒಂದೇ ದಿನದಲ್ಲಿ ಶಾಲೆ ಶಿಫ್ಟ್ ಮಾಡಿಸಿದ್ದು. ತಾಲೂಕಿನಲ್ಲಿ 150 ಶಾಲೆಗಳನ್ನು ಶಾಸಕರ ಸಹಕಾರದಿಂದ ರಿಪೇರಿ ಮಾಡಿಸಿದ್ರು. ಇವರ ಇಚ್ಛಾಶಕ್ತಿಯಿಂದಾಗಿ ಶಾಸಕ ಗವಿಯಪ್ಪನವರು ಶಿಕ್ಷಣಕ್ಕೆ ಹೆಚ್ಚು ಒತ್ತುನೀಡಿದರು ಅವರ ಮುಂದಿನ ಜೀವನ ಸುಖಕರವಾಗಿರಲಿ ಎಂದು ಶುಭ ಹಾರೈಸಿದರು.


ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿಬಾಬು ಬಿ.ಎಲ್.ಮಾತನಾಡಿ, ನಮ್ಮ ಹಾಗು ಚೆನ್ನಬಸಪ್ಪನವರ ನಡುವೆ ಕಡಿಮೆ ಅವಧಿಯಲ್ಲೂ ಉತ್ತಮ ಭಾಂಧವ್ಯ ಇತ್ತು. ಶಾಲೆಗೆ ರಜೆ ಕೊಡುವ ವಿಚಾರದಲ್ಲಿ ಅವರು ತೆಗೆದುಕೊಂಡು ನಿರ್ಧಾರ ನಿಜಕ್ಕೂ ನಮಗೆ ಖುಷಿ ತಂದಿತ್ತು. ಇವರ ಕಾರ್ಯಕ್ಷಮತೆಗೆ ಇಲ್ಲಿ ಸೇರಿರುವ ಜನಸಂಖ್ಯೆ ನೋಡಿದರೆ ಇವರ ಸೇವೆ ಇಲಾಖೆಗೆ ಎಷ್ಟು ಅಗತ್ಯವಿತ್ತುಎಂದುತಿಳಿಯುತ್ತದೆಎಂದುಶ್ಲಾಘಿಸಿದರು.

ಡಿಡಿಪಿಐ ವೆಂಕಟೇಶ ರಾಮಚಂದ್ರಪ್ಪ,ವಾಡಾ ಆಯುಕ್ತ ಎಲ್.ಡಿ.ಜೋಶಿ,ಬಿಇಒಗಳಾದಮೈಲೇಶ್ ಬೇವೂರು, ಪದ್ಮನಾಭಕರಣಂ,ಸುರಿಂದರ್ ಕಾಂಬಳೆ,ಸುನಂದಮ್ಮ (ನಿವೃತ್ತಿ) ಹಾಗು ಬಿಸಿಯೂಟ ಅಧಿಕಾರಿ ಶೇಖರಪ್ಪ ಹೊರಪೇಟೆ ಅವರು ಎಂ.ಚೆನ್ನಬಸಪ್ಪನವರ ಸೇವೆಯ ಕುರಿತು ಗುಣಗಾನ ಮಾಡಿದರು. ಬಳಿಕ ಎಲ್ಲರಿಂದ ಸನ್ಮಾನ ಸ್ವೀಕರಿಸಿದ ಎಂ.ಚೆನ್ನಬಸಪ್ಪನವರು, ಹಿರಿಯ ಅಧಿಕಾರಿಗಳಿಗೆ, ಇಲಾಖೆಯ ಮೇಲಾಧಿಕಾರಿಗಳಿಗೆ, ಸಮಕಾಲೀನವರಿಗೆ, ಹಿತೈಷಿಗಳಿಗೆ, ಅಭಿಮಾನಿಗಳಿಗೆ, ಸಿಬ್ಬಂದಿಗಳಿಗೆ ಧನ್ಯವಾದಗಳನ್ನು ತಿಳಿಸಿದರು. ಈ ಸಂಧರ್ಭದಲ್ಲಿ ಹುಡಾ ಅಧ್ಯಕ್ಷ ಇಮಾಮ್ ನಿಯಾಜಿ, ಮುಖಂಡರಾದ ಅಂಜಿನಪ್ಪ, ನಾಗೇನಹಳ್ಳಿ ಬಸವರಾಜ, ರಾಮಚಂದ್ರಗೌಡ ಸೇರಿದಂತೆ ಇತರರು ಇದ್ದರು. ಶಿಕ್ಷಕರಾದ ನಾಗರಾಜ, ಮೋಟಿಗಿ ಮಲ್ಲಯ್ಯ ಕಾರ್ಯಕ್ರಮ ನಿರ್ವಹಿಸಿದರು.

## ಕೊಟ್ರೇಶ್ ಚಿಮ್ಮನಹಳ್ಳಿಗೆ ಮುಖ್ಯಮಂತ್ರಿ ಪದಕ

● ವಾರ್ತಾಲೋಕ ವಾರ್ತೆ

**ಕೊಟ್ಟೂರು : ಏಪ್ರಿಲ್ 1 :** ತಾಲೂಕಿನ ಬೋರನಹಳ್ಳಿ ಗ್ರಾಮದ ಪೊಲೀಸ್ ಹೆಡ್ ಕಾನ್ ಸ್ಟೇಬಲ್ ಕೊಟ್ರೇಶ್ ಚಿಮ್ಮನಹಳ್ಳಿ ಅವರಿಗೆ 2024 ನೇ ಸಾಲಿನ ಮುಖ್ಯಮಂತ್ರಿ ಪದಕ ಪ್ರದಾನ ಮಾಡಲು 02.04.2025 ಆರಕ್ಷಕ ಮಹಾ ನಿರ್ದೇಶಕರು ಆದೇಶ ಹೊರಡಿಸಿದ್ದಾರೆ.



ಕೊಟ್ರೇಶ್ ಅವರು 2005 ರಿಂದ ಪೊಲೀಸ್ ಇಲಾಖೆಯಲ್ಲಿ ಕಾರ್ಯ ಸುಮಾರು 20 ವರ್ಷಗಳಿಂದ ನಿರ್ವಹಿಸುತ್ತಿದ್ದಾರೆ. ಇವರು ಅಪರಾಧ ವಿಭಾಗದಲ್ಲಿ ಅಪಾರ ಸೇವೆ ಸಲ್ಲಿಸಿ, ಮಾಡಿದ ಸಾಧನೆಗೆ ಸುಮಾರು 37 ನಗದು ಬಹುಮಾನ, 54 ಪ್ರಶಸ್ತಿ, 3 ಪ್ರಶಂಸೆ ಪತ್ರ, ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಈಗಾಗಲೇ ಗೌರವಿಸಲಾಗಿದೆ.

ಪ್ರಸ್ತುತ ಇವರು ಕೂಡ್ಲಿಗಿಯ ಡಿವೈಎಸ್ಪಿ ಕಛೇರಿಯ ಅಪರಾಧ ವಿಭಾಗದಲ್ಲಿ ಹೆಡ್ ಕಾನ್ ಸ್ಟೇಬಲ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ರಾಜ್ಯದ ಒಟ್ಟು 197 ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಮುಖ್ಯಮಂತ್ರಿ ಪದಕ ಪ್ರದಾನ ಪ್ರಶಸ್ತಿಗೆ ಭಾಜನರಾಗಿದ್ದಾರೆ

ಮುಖ್ಯಮಂತ್ರಿ ಪದಕಕ್ಕೆ ಕೊಟ್ರೇಶ್ ಅವರು ಆಯ್ಕೆಯಾಗಿರುವುದು ಊರಿಗೆ ಮತ್ತು ತಾಲೂಕಿಗೆ ಹೆಮ್ಮೆಯ ವಿಷಯವಾಗಿದೆ. ಮುಖ್ಯಮಂತ್ರಿ ಪದಕಕ್ಕೆ ಆಯ್ಕೆಯಾದ ಇವರಿಗೆ ಗ್ರಾಮಸ್ಥರು, ಸ್ನೇಹಿತರು ಶುಭ ಹಾರೈಸಿ ಹರ್ಷವನ್ನು ವ್ಯಕ್ತಪಡಿಸುತ್ತಿದ್ದಾರೆ.

**ವರದಿ ಪರಶುರಾಮ್**

# ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಸಭೆ



**ನವಲಗುಂದ :** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಫಲಾನುಭವಿಗಳಿಗೂ ತ್ವರಿತವಾಗಿತಲುಪಬೇಕುಎಂದುತಾಲೂಕಾಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವರ್ಧಮಾನಗೌಡ ಪಾಟೀಲ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತಿ ಸಭಾಭವನದಲ್ಲಿ ನಡೆದ ಗ್ಯಾರಂಟಿ ಸಭೆಯಲ್ಲಿ ಮಾತನಾಡಿದ ಅವರು ಸರಕಾರ ಮಹತ್ತರ ಯೋಜನೆಗಳಾದ ಗ್ಯಾರಂಟಿ ಯೋಜನೆಗಳು ಅರ್ಹ ವ್ಯಕ್ತಿಗಳಿಗೆ ತಲುಪಿಸಲು ಆಯಾ ಇಲಾಖೆ ಅಧಿಕಾರಿಗಳು ಸಹಕಾರ ನೀಡಬೇಕು ಅಲ್ಲದೇ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ನಡೆದುಕೊಂಡು ಅವರ ಕೆಲಸಗಳನ್ನು ತಡಮಾಡದೇ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನವಲಗುಂದ ತಾಲ್ಲೂಕಿನ ವ್ಯಾಪ್ತಿಯ 525 ಯುವನಿಧಿ ಯೋಜನೆ ಫಲಾನುಭವಿಗಳು ನೋಂದಣಿ ಮಾಡಿಸಿಕೊಂಡಿದ್ದು 329 ಮಂದಿ ಹಣ ಪಡೆಯುತ್ತಿದ್ದು ಬಾಕಿ ಉಳಿದವರಿಗೂ ಹಾಗೂ ತಾಲ್ಲೂಕಿನಲ್ಲಿರುವ ಇನ್ನುಳಿದವರಿಗೂ ಯೋಜನೆಯ ಅನುಕೂಲ ದೊರೆಯುವ ಕುರಿತು ಶಾಸಕರಾದ ಎನ್ ಎಚ್ ಕೋನರಡ್ಡಿ ಯಾವರೊಂದಿಗೂ ಚರ್ಚಿಸಿ ವಿಧಾನಸಭಾ ಕ್ಷೇತ್ರದಲ್ಲಿ ಹೆಚ್ಚು ಪ್ರಚಾರ ಮಾಡಬೇಕು ಎಂದರಲ್ಲದೆ ನಿಯಮಾನುಸಾರ ಪ್ರತಿ ತಿಂಗಳು ಸ್ವಯಂ ಘೋಷಣೆ ಮಾಡಿಸಿಕೊಳ್ಳುವಂತೆ ಸಲಹೆ ನೀಡಿದರು. ಈ ವೇಳೆ ತಾಪಂ ಇಓ ಭಾಗ್ಯಶ್ರೀ ಜಾಹಗೀರದಾರ, ಈರಣ್ಣ ಶಿಡಗಂಟಿ, ಕರಿಯಪ್ಪ ಕೋಟುರ, ಯಲ್ಲಪ್ಪ ಗಾಣಿಗೇರ ಸೇರಿದಂತೆ ಗ್ಯಾರಂಟಿ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಇದ್ದರು.

# ದೇಶಕ್ಕೆ ರಂಗಭೂಮಿಯ ಕೊಡುಗೆ ಅಪಾರ



**ಧಾರವಾಡ :** ರಂಗಭೂಮಿದೇಶಕ್ಕೆಕೊಟ್ಟಕೊಡುಗೆಅಪಾರವಾಗಿದೆ. ದಿನನಿತ್ಯ ನಡೆಯುವ ಅನೇಕ ಘಟನೆಗಳನ್ನು ನಾಟಕದ ಮೂಲಕ ಪ್ರಚರಪಡಿಸುವುದುರಂಗಭೂಮಿಯ ಕೆಲಸವಾಗಿದೆ.ಸಾಮಾಜಿಕವಾಗಿಜನರ ಮನಸ್ಸಿನ ಮೇಲೆ ಅಪಾರವಾದ ಪರಿಣಾಮವನ್ನು ಬೀರಬಲ್ಲ ಸಾಮರ್ಥ್ಯ ರಂಗಭೂಮಿಗೆ ಇದೆ.87 ದೇಶಗಳಲ್ಲಿ ರಂಗಭೂಮಿ ದಿನಾಚರಣೆಯನ್ನುಆಚರಿಸುವುದರ ಮೂಲಕ ವಿಶ್ವರಂಗಭೂಮಿ ದಿನಾಚರಣೆ ಎಂದು ಕರೆಯಲ್ಪಟ್ಟಿದೆ ಎಂದು ಧಾರವಾಡ ರಂಗಾಯಣದ ನಿರ್ದೇಶಕರಾಜು ತಾಳಿಕೋಟಿ ಹೇಳಿದರು.

ಕರ್ನಾಟಕ ವಿದ್ಯಾವರ್ಧಕ ಸಂಘವು ಆಯೋಜಿಸಿದ್ದ ನಾಡೋಜಡಾ. ಏಣಗಿ ಬಾಳಪ್ಪ ಸ್ಮರಣಾರ್ಥದತ್ತಿ ನಿಮಿತ್ತ ವಿಶ್ವರಂಗಭೂಮಿ ದಿನಾಚರಣೆ ಅಂಗವಾಗಿ ದತ್ತಿಉಪನ್ಯಾಸ, ರಂಗಗೌರವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು

ಮುಂದುವರೆದು ಮಾತನಾಡಿದ ಅವರು, ಏಣಗಿ ಬಾಳಪ್ಪನವರ ಕೊಡುಗೆರಂಗಭೂಮಿಗೆಅಪಾರವಾಗಿದೆ. ಅದೇರೀತಿಚಿತ್ತರಗಿಯಗಂಗಾಧರಶಾಸ್ತ್ರೀಗಳ ಕೊಡುಗೆಯನ್ನು ಮರೆಯುವಂತಿಲ್ಲ. ನಾಟಕಗಳ ಮುಖಾಂತರವಾಗಿ ಸಾಮಾಜಿಕ ಸ್ವಾಸ್ಥ್ಯವನ್ನುಕಾಪಾಡುವಲ್ಲಿ ಅನೇಕ ರಂಗ ತಂಡಗಳು ಕಾರ್ಯ ನಿರ್ವಹಿಸುತ್ತಾ ಬಂದಿರುವುದು ಹೆಮ್ಮೆಯ ಸಂಗತಿಯಾಗಿದೆಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ನಾಡೋಜಏಣಗಿ ಬಾಳಪ್ಪನವರ ಪ್ರೋತ್ಸಾಹ ಮತ್ತು ಪ್ರೇರಣೆಯ ಮಾತುಗಳು ತಮ್ಮ ಮೇಲೆ ಬೀರಿದ ಪ್ರಭಾವವನ್ನು, ಹೃದಯಸ್ಪರ್ಶಿ ಭಾವನೆಗಳನ್ನು ಬೆಳಗಾವಿಯ ನಾಟ್ಯಭೂಷಣಏಣಗಿ ಬಾಳಪ್ಪ ಪ್ರತಿಷ್ಠಾನದ ಸದಸ್ಯ ಬಸವರಾಜ ಬೆಂಗೇರಿ ಹಂಚಿಕೊಂಡರು.

ಲಕ್ಷ್ಮೇಶ್ವರದ ಸ್ತ್ರೀ ಸಂಗೀತ ನಾಟಕ ಮಂಡಳಿ ಕುರಿತು ಬೆಂಗಳೂರು ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿ ಮಹ್ಮದಲಿ ಆರ್. ಹೊಸೂರ ಹಾಗೂ ಚಿತ್ತರಗಿಯ ಶ್ರೀ ಕುಮಾರ ವಿಜಯ ನಾಟ್ಯ ಸಂಘದಕುರಿತು ಮೈಸೂರಿನ ಪತ್ರಕರ್ತ, ರಂಗ ವಿಮರ್ಶಕಗಣೇಶಅಮೀನಗಡಅಭಿನಂದನಾ ನುಡಿಗಳನ್ನಾಡಿದರು.

ಲಕ್ಷ್ಮೇಶ್ವರದ ಸ್ತ್ರೀ ಸಂಗೀತ ನಾಟಕ ಮಂಡಳಿ ಪರವಾಗಿಗದಗ ಶ್ರೀಮತಿ ಶಾರದಮ್ಮಾ ಹೊಂಬಳ ಹಾಗೂ ಚಿತ್ತರಗಿಯ ಶ್ರೀ ಕುಮಾರ ವಿಜಯ ನಾಟ್ಯ ಸಂಘದ ಪರವಾಗಿ ಬಾಗಲಕೋಟೆಯ ಶ್ರೀಮತಿ ವಿಜಯಲಕ್ಷ್ಮೀ ಹಿರೇಮಠರಂಗಗೌರವ ಸನ್ಮಾನ ಸ್ವೀಕರಿಸಿದರು.

ಡಾ. ಬಸವರಾಜಏಣಗಿದತ್ತಿಆಶಯಕುರಿತು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಕ.ವಿ.ವ. ಸಂಘದಅಧ್ಯಕ್ಷಚಂದ್ರಕಾಂತ ಬೆಲ್ಲದ, ರಂಗಭೂಮಿಯ ನಕ್ಷತ್ರದಂತಿದ್ದಏಣಗಿ ಬಾಳಪ್ಪನವರು, ರಂಗಭೂಮಿಯನ್ನು ಶ್ರೀಮಂತಗೊಳಿಸಿದವರು.

ರಂಗಭೂಮಿಗೆ ಅವರ ಕೊಡುಗೆ ಅಪಾರವಾದುದು ಎಂದು ಹೇಳಿದರು.

ಶಂಕರಕುಂಬಿಸ್ವಾಗತಿಸಿದರು.ವೀರಣ್ಣಒಡ್ಡೀನ ಪ್ರಾಸ್ತಾವಿಕವಾಗಿ ಮಾತನಾಡಿದರು.ಡಾ. ಜಿನದತ್ತ ಹಡಗಲಿ ನಿರೂಪಿಸಿದರು.

ಡಾ. ಧನವಂತ ಹಾಜವಗೋಳ ವಂದಿಸಿದರು.

ಕಾರ್ಯಕ್ರಮದಲ್ಲಿಸತೀಶತುರಮರಿ, ಗುರು ಹಿರೇಮಠ, ಶಿವಾನಂದ ಭಾವಿಕಟ್ಟಿ, ಡಾ. ಸುಭಾಸಏಣಗಿ,ಅರವಿಂದಏಣಗಿ,ಅಶೋಕ ಏಣಗಿ, ಡಾ.ಬಸವರಾಜಜಗಜಂಪಿ, ಡಾ.ರಾಮಕೃಷ್ಣ ಮರಾಠೆ, ಡಾ.ಪಿ.ಜಿ. ಕೆಂಪಣ್ಣವರ,

ಶಿರೀಶ್ ಜೋಶಿ, ಡಾ.ಶಶಿಧರ ನರೇಂದ್ರ, ಡಾ.ಪ್ರಕಾಶಗರುಡ, ಶ್ರೀಮತಿ ಸುನಂದಾ ಹೊಸಪೇಟೆ, ಸೋಮಶೇಖರ ಕನಕಾಚಲ, ಕೊಟ್ರೇಶಅಂಗಡಿ,

ಎಂ.ಎಂ.ಚಿಕ್ಕಮಠ ಸೇರಿದಂತೆಏಣಗಿ ಪರಿವಾರದವರು, ಅಭಿಮಾನಿಗಳು ಉಪಸ್ಥಿತರಿದ್ದರು.

# ಮೊರಬದಲ್ಲಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮ



**ನವಲಗುಂದ :** ಕಷ್ಟಗಳು ಏನೇ ಬಂದರು ದೇವರ ಮೊರೆ ಹೋಗದೆ ಆಧ್ಯಾತ್ಮಿಕ ಜೀವನಕ್ಕೆ ಮುಂದಾದಾಗ ಜೀವನದಲ್ಲಿ ಯಶಸ್ಸಿನೊಂದಿಗೆ ಸದ್ಗುಣ ಮತ್ತು ದೇವರ ಕರುಣೆ ನಿಮಗೆ ದಯಪಾಲಿಸುತ್ತದೆ ಎಂದು ಬೈಲಹೊಂಗಲತಾಲ್ಲೂಕಿನದೊಡವಾಡಹಿರೇಮಠದ ಉಮೇಶ್ವರ ಶಿವಾಚಾರ್ಯ ಸ್ವಾಮೀಜಿ ನುಡಿದರು.

ಅವರು ಮೊರಬ ಗ್ರಾಮದ ಶ್ರೀ ಜಡೆಮಠದ ಜಾತ್ರಾ ಮಹೋತ್ಸವ ಹಾಗು ಶ್ರೀ ಷ ಬ್ರ ಮಹೇಶ್ವರ ಶಿವಾಚಾರ್ಯ ಸ್ವಾಮಿಗಳವರ ಪ್ರಥಮ ವರ್ಷದ ಪಟ್ಟಾಧಿಕಾರದ ವರ್ದಂತಿ ಮಹೋತ್ಸವ ಹಾಗೂ 2 ನೇ ದಿನದ ಆದ್ಯಾತ್ಮಿಕ ಪ್ರವಚನ ಕಾರ್ಯಕ್ರಮ ದಲ್ಲಿ ಪ್ರವಚನ ನೀಡಿದರು.

ಹಾವೇರಿ ಜಿಲ್ಲೆ ಸವಣೂರ ಹುಣಸಿಮಠದ ಶ್ರೀ ಚನ್ನಬಸವ ಮಹಾಸ್ವಾಮಿಗಳು ಶಿರೋಳ ತೋಟದಾರ್ಯಮಠದ ಶಾಂತಲಿಂಗ ಸ್ವಾಮಿಗಳು ಆದ್ಯಾತ್ಮಿಕ ಪ್ರವಚನದಲ್ಲಿ ಉಪಸ್ಥಿತರಿದ್ದರು.

# ಡಿಸಿಎಂ ಹೇಳಿಕೆ ಖಂಡಿಸಿ ಪ್ರತಿಭಟನೆ



**ಚನ್ನಮ್ಮನ ಕಿತ್ತೂರು :** ಮುಸ್ಲಿಮರ ಮತ ಪಡೆಯಲು ಸಂವಿಧಾನ ಬದಲಾಯಿಸುತ್ತೇನೆಂದ ಡಿಸಿಎಂ ಡಿ.ಕೆ.ಶಿವಕುಮಾರ ಹೇಳಿಕೆ ಖಂಡಿಸಿ ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ನೇತೃತ್ವದಲ್ಲಿ ಬಿಜೆಪಿ ಮಂಡಳ ವತಿಯಿಂದ ರಾಷ್ಟ್ರೀಯ ಹೆದ್ದಾರಿ 4ರ ರಾಣಿ ಚನ್ನಮ್ಮ ವರ್ತುಳದಲ್ಲಿ ಡಿ.ಕೆ.ಶಿ. ವ್ಯಂಗ್ಯ ಚಿತ್ರ ರಚಿಸಿ ದಹನ ಮಾಡಿ ಪ್ರತಿಭಟನೆ ನಡೆಸಲಾಯಿತು.

ನಂತರ ಅವರು ಮಾತನಾಡಿ ರಚನೆಗೊಂಡಿರುವ ಕಾಂಗ್ರೆಸ್ ಸಚಿವ ಸಂಪುಟದಿಂದ ಡಿಕೆಶಿ ಅವರನ್ನು ಉಚ್ಚಟನೆಗೊಳಿಸಿ ವಜಾ ಮಾಡಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು. ಇವರ ಹೇಳಿಕೆಗಳು ಸದಾ ಮುಸ್ಲಿಮರ ಪರ ಇರುತ್ತವೆ.

ಸರ್ಕಾರಿಗುತ್ತಿಗೆಗಳಲ್ಲಿಮುಸ್ಲಿಮರಿಗೆ ಶೇಕಡಾ 4 ರಷ್ಟು ಮೀಸಲಾತಿ ಸಂಬಂಧಿಸಿದಂತೆ ಸಂವಿಧಾನ ಬದಲಾವಣೆ ಹೇಳಿಕೆ ನೀಡುವುದು ಡಿಕೆಶಿ ಅವರಿಗೆ ಶೋಭೆ ತರುವ ಮಾತಲ್ಲ ಅವರು ಸಂವಿಧಾನಕ್ಕೆ ವಿರೋಧಿಯಾಗಿದ್ದಾರೆ. ಈ ಕೂಡಲೇ ಅವರ ಹೇಳಿಕೆ ಹಿಂಪಡೆಯಬೇಕು ಇಲ್ಲವಾದ್ದಲ್ಲಿ ರಾಜ್ಯಾದ್ಯಾಂತ ಉಗ್ರ ಹೋರಾಟ ಪ್ರತಿಭಟನೆ ಪ್ರಾರಂಭವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಬಿಜೆಪಿ ಮಂಡಳ ಅಧ್ಯಕ್ಷ ಶ್ರೀಕರ ಕುಲಕರ್ಣಿ, ಮುಖಂಡೆ ಲಕ್ಷ್ಮಿ ?ಮೀ ಇನಾಮದಾರ, ಮಂಡಳ ನಿಕಟಪೂರ್ವ ಅಧ್ಯಕ್ಷ ಬಸವರಾಜ ಪರವಣ್ಣವರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂದೀಪ ದೇಶಪಾಂಡೆ,

ರವಿರಾಜ ಇನಾಮದಾರ, ಉಳವಪ್ಪ ಉಳ್ಳಾಗಡ್ಡಿ, ಜಗದೀಶ ವಸ್ತ್ರದ ಬಸನಗೌಡ ಕೊಳದೂರ, ಶಿವಾನಂದ

ಹನಮಸಾಗರ, ನ್ಯಾಯವಾದಿ ವಿಶ್ವನಾಥ ಬಿಕ್ಕಣ್ಣವರ, ರಾಜು ಡೂಗನವರ, ಬಸವರಾಜ ಮಾತನಾವರ, ರಮೇಶ ಉಗರಖೋಡ, ಇನ್ನಿತರ ಬಿಜೆಪಿ ಮುಖಂಡರು, ಕಾರ್ಯಕರ್ತರಿದ್ದರು.

# ಶಂಕುಸ್ಥಾಪನೆ ಅಷ್ಟೇ ಅಲ್ಲ, ಪ್ರಗತಿ ಪರಿಶೀಲನೆಗೂ ಸ್ವತಃ ಫೀಲ್ಡಿಗಿಳಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್!



**ಬೆಳಗಾವಿ :** ಕಾಮಗಾರಿ ಶಂಕುಸ್ಥಾಪನೆ ನೆರವೇರಿಸಿ ಕೈ ತೊಳೆದುಕೊಳ್ಳುವ ಜನಪ್ರತಿನಿಧಿಗಳೇ ಹೆಚ್ಚಾಗಿರುವ ಈ ಸಂದರ್ಭದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಕಾಮಗಾರಿಗಳ ಪ್ರಗತಿ ಮತ್ತು ಗುಣಮಟ್ಟ ಪರಿಶೀಲನೆಗೆ ಸ್ವತಃ ಫೀಲ್ಡ್ ಗೆ ಇಳಿದಿದ್ದಾರೆ.

ವಾಘವಾಡೆಯಲ್ಲಿ ರಸ್ತೆ ಕಾಮಗಾರಿ ಪರಿಶೀಲಿಸಿದ್ದ ಸಚಿವರು ಇಂದು

ಹಿಂಡಲಗಾ ವಿಜಯ ನಗರದ ಪೈಪ್ ಲೈನ್ ರಸ್ತೆಯಲ್ಲಿ ನಿರ್ಮಾಣ ಹಂತದಲ್ಲಿರುವ ಶ್ರೀ ಗಣಪತಿ ಮಂದಿರದ ಕಟ್ಟಡ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಗ್ರಾಮಸ್ಥರಅಭಿಪ್ರಾಯಗಳನ್ನುಪಡೆದಸಚಿವರು,ಅವರ ಸಲಹೆಯಂತೆ ಕಾಮಗಾರಿ ನಡೆಸಲು ಗುತ್ತಿಗೆದಾರರಿಗೆ ಸೂಚಿಸಿದರು. ಜೊತೆಗೆ ಗುಣಮಟ್ಟದಲ್ಲಿ ಯವುದೇ ರಾಜಿ ಇಲ್ಲ ಎಂದೂ ಸ್ಪಷ್ಟವಾಗಿ ತಿಳಿಸಿದರು.

ಈ ವೇಳೆ ಸ್ಥಳೀಯ ನಿವಾಸಿಗಳು, ಮಂದಿರ ಸಮಿತಿಯ ಸದಸ್ಯರು, ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ: ವಯಸ್ಕರ ಬಿ.ಸಿ.ಜಿ. ಲಸಿಕಾಕರಣಕ್ಕೆ ಚಾಲನೆ



**ಬೆಳಗಾವಿ :** ಕ್ಷಯರೋಗ ನಿರ್ಮೂಲನೆಯಲ್ಲಿ ಲಸಿಕಾಕರಣವು ಪ್ರಮುಖವಾದ ಪಾತ್ರವನ್ನು ನಿರ್ವಹಿಸಲಿದ್ದು ದುರ್ಬಲ ವರ್ಗದ ಜನರಾದ 60 ವರ್ಷ ಮೇಲ್ಪಟ್ಟವರು, ಮಧುಮೇಹದಿಂದ ಬಳಲುತ್ತಿರುವವರು, ಧೂಮ ಪಾನ ಹಾಗೂ ಮಧ್ಯ ವ್ಯಸನಿಗಳು, ಅಪೌಷ್ಠಿಕತೆಯಿಂದ ಬಳಲುತ್ತಿರುವವರು(<18ಬಿ.ಎಂ.ಐ), ಕ್ಷಯರೋಗಿಗಳ ಸಂಪರ್ಕಿತರು ವಯಸ್ಕರ ಬಿ.ಸಿ.ಜಿ. ಲಸಿಕಾಕರಣದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಐ. ಪಿ. ಗಡಾದ ಅವರು ಕರೆ ನೀಡಿದರು.

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕ್ಷಯರೋಗ ನಿಯಂತ್ರಣ ವಿಭಾಗ, ವೈದ್ಯಕೀಯ ವಿಜ್ಞಾನ ಸಂಸ್ಥೆ ಬೆಳಗಾವಿ, ಹಿಂಡಾಲ್ಕೋ ಇಂಡಸ್ಟ್ರೀಜ್ ಪೈ. ಲಿಮಿಟೆಡ್, ತಾಲೂಕಾ ಕ್ಷಯರೋಗ ಘಟಕ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಯವರ ಸಭಾಂಗಣದಲ್ಲಿ ಶುಕ್ರವಾರ (ಮಾ.28) ರಂದು ಬೆಳಿಗ್ಗೆ 11.30 ಗಂಟೆಗೆ ಆಯೋಜಿಸಿದ್ದ ವಯಸ್ಕರ ಬಿ.ಸಿ.ಜಿ. ಲಸಿಕಾಕರಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

“ಹೌದು ನಾವು ಕ್ಷಯರೋಗವನ್ನು ಕೊನೆಗೊಳಿಸಬಹುದು”:(ಬದ್ಧತೆ,ಹೂಡಿಕೆ, ವಿತರಣೆ) [ "Yes! We Can End TB: Commit, Invest, Deliver"] ಎಂಬ ಘೋಷಣೆಯನ್ನು ಡಾ. ಗಡಾದ ಅವರು ಹೇಳಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಚಾಂದಿನಿ ದೇವಡಿ ಮಾತನಾಡಿ ವಯಸ್ಕರ ಬಿಸಿಜಿ ಲಸಿಕಾಕರಣದ ಕುರಿತು ವಿವರಿಸುತ್ತಾ ಇದೊಂದು ಅಧ್ಯಯನ ಕಾರ್ಯಕ್ರಮವಾಗಿದ್ದು, ಭಾರತಾದ್ಯಂತ ಆಯ್ದ ರಾಜ್ಯಗಳ ಹಲವು ಜಿಲ್ಲೆಗಳಲ್ಲಿ ನಡೆದಿದ್ದು, ಈಗ ಕರ್ನಾಟಕ ರಾಜ್ಯದ 10 ಜಿಲ್ಲೆಗಳನ್ನು ಸಂಶೋಧನಾತ್ಮಕ (Intervintion) ಜಿಲ್ಲೆಗಳೆಂದು ಅನುಮೋದಿಸಿ ವಿಸ್ತರಿಸಿದ್ದು ಅದರಲ್ಲಿ ಬೆಳಗಾವಿ ಜಿಲ್ಲೆಯು ಸಹ ಒಂದಾಗಿದೆ ಎಂದು ವಿವರಿಸಿದರು.

ದುರ್ಬಲ ವರ್ಗದ ಜನಸಂಖ್ಯೆಯನ್ನು ಆಧಾರವಾಗಿಇಟ್ಟುಕೊಂಡುವಯಸ್ಕರಬಿಸಿಜಿ ಲಸಿಕೆಯನ್ನುಪ್ರಾರಂಭಿಸಬೇಕಾಗಿದ್ದುಸದರಿ ಸಮಿಕ್ಷೆಗೆ ಆರ್.ಸಿ.ಹೆಚ್. ಕಾರ್ಯಕ್ರಮದ ಸಹಯೋಗದೊಂದಿಗೆ ನಿಯಮಿತ ಲಸಿಕಾಕರಣ ಚಟುವಟಿಕೆಗಳೊಂದಿಗೆ ವಯಸ್ಕರ ಬಿಸಿಜಿ ಲಸಿಕಾಕರಣ ಕಾರ್ಯಕ್ರಮವನ್ನು ಸಂಯೋಜಿಸಲಾಗಿದೆ ಎಂದು ತಿಳಿಸಿದರು.

ಬೆಳಗಾವಿ ವಿಭಾಗದ ಡಬ್ಲೂ.ಹೆಚ್.ಓ ಸಲಹೆಗಾರರು (ಕ್ಷಯ) ಡಾ. ಸತೀಶ ಘಾಟಗೆ ಮಾತನಾಡಿ ಕ್ಷಯರೋಗ ನಿರ್ಮೂಲನೆಯಲ್ಲಿ ಔಷಧಿ ಹಾಗೂ ಆರೈಕೆಯಜೊತೆಗೆಕುಟುಂಬದಸಹಯೋಗ ಅತೀ ಅವಶ್ಯವಿದ್ದು, ಕ್ಷಯರೋಗದಿಂದ ಆಗಬಹುದಾದ ಸೋಂಕನ್ನು ತಡೆಗಟ್ಟುವಲ್ಲಿ ವಯಸ್ಕರ ಬಿ.ಸಿ.ಜಿ. ಲಸಿಕಾಕರಣವು ಪ್ರಮುಖವಾದ ಪಾತ್ರವನ್ನು ನಿರ್ವಹಿಸಲಿದ್ದು ಎಲ್ಲಾ ಕ್ಷಯರೋಗದ ಫಲಾನುಭವಿಗಳು ಹಾಗೂ ಸಂಘ ಸಂಸ್ಥೆಗಳು ಈ ಅಭಿಯಾನದ ಕುರಿತು ಜಾಗೃತಿ ಮೂಡಿಸಿ ಎಲ್ಲರೂ ಈ ಲಸಿಕಾಕರಣದ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ 60 ಫಲಾನುಭವಿಗಳಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ವಿತರಿಸಲಾಯಿತು.

ಜಿಲ್ಲಾಸರ್ವೇಕ್ಷಣಾಧಿಕಾರಿಗಳುಡಾ.ಸಂಜಯ ದೊಡಮನಿ, ಬೆಳಗಾವಿ ವಿಭಾಗದ ಡಬ್ಲೂ. ಹೆಚ್.ಓ ಸಲಹೆಗಾರರು (ಕ್ಷಯ) ಡಾ. ಸತೀಶ ಘಾಟಗೆ, ಸ್ಥಳಿಯ ವೈದ್ಯಾಧಿಕಾರಿಗಳು ಡಾ. ಜೋಸ್ನಾ, ತಾಲೂಕಾ ಆರೋಗ್ಯಾಧಿಕಾರಿ ಡಾ. ರಮೇಶ ದಂಡಗಿ, ಡಿಟಿಸಿ ಹಾಗೂ ಆರೋಗ್ಯ ಇಲಾಖೆಯ ವೈದ್ಯಾಧಿಕಾರಿ ಡಾ. ಬಿ. ಎನ್. ತುಕ್ಕಾರ,

ಸಿಬ್ಬಂದಿ ವರ್ಗದವರು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ವಿವಿಧ ಸಂಘ ಸಂಸ್ಥೆಗಳ ಜನಪ್ರತಿನಿಧಿಗಳು, ವಿವಿಧ ಆಸ್ಪತ್ರೆಗಳ ವೈದ್ಯಾಧಿಕರಿಗಳು, ಹಾಗೂ ಸ್ವಯಂಸೇವಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಜೈಲ್ ಜಾಮರ್ ಸಮಸ್ಯೆ: ಹಿಂಡಲಗಾ ಗ್ರಾಮಸ್ಥರ ನೆರವಿಗೆ ಧಾವಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



**ಬೆಳಗಾವಿ :** ಬೆಳಗಾವಿ ಹಿಂಡಲಗಾ ಸೆಂಟ್ರಲ್ ಜೈಲಿಗೆ ಭೇಟಿ ನೀಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್,

ಜೈಲ್ ನಲ್ಲಿ ಅಳವಡಿಕೆಯಾಗಿರುವ ಜಾಮರ್ ರೇಂಜ್ ತಗ್ಗಿಸುವಂತೆ ಸೂಚನೆ ನೀಡಿದರು.

ನೆಟ್ವರ್ಕ್ ಜಾಮರ್ ನಿಂದ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ, ವಿದ್ಯಾರ್ಥಿಗಳಿಗೆ, ಬ್ಯಾಂಕ್ ಸಿಬ್ಬಂದಿಗೆ ಹಲವಾರು ತೊಂದರೆಗಳಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ಸಚಿವರನ್ನು ಭೇಟಿ ಮಾಡಿ ಅಹವಾಲು ಸಲ್ಲಿಸಿದ್ದರು.

ಈ ಹಿನ್ನೆಲೆಯಲ್ಲಿ ಶನಿವಾರ ಜೈಲಿಗೆ ಭೇಟಿ ನೀಡಿದ ಸಚಿವರು, ಜಾಮರ್ ರೆಂಜ್ ಕಡಿಮೆಗೊಳಿಸುವಂತೆ ಜೈಲ್ ಸೂಪರಿಂಟೆಂಡೆಂಟ್ ಅಧಿಕಾರಿಗೆ ಸೂಚನೆ ನೀಡಿದರು.

# ಜಿಲ್ಲಾ ನಿರ್ಮಿತಿ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ

## ನಿರ್ಮಾಣ, ತಾಂತ್ರಿಕತೆ ಕ್ಷೇತ್ರದಲ್ಲಿ ನಿರ್ಮಿತಿ ಕೇಂದ್ರದ ಕೊಡುಗೆ ಅಪಾರ: ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮೆಚ್ಚುಗೆ



**ಬೆಳಗಾವಿ :** ಭಾರತ ಸರ್ಕಾರ/ ಹುಡ್ಕೋ ಮತ್ತು ಕರ್ನಾಟಕ ಸರ್ಕಾರದ ಪ್ರೋತ್ಸಾಹಿತ ಜಿಲ್ಲಾ ನಿರ್ಮಿತಿ ಕೇಂದ್ರದ ವತಿಯಿಂದ ಗಣೇಶಪುರ ಲಕ್ಷ್ಮೀ ಟೇಕ್ ಹತ್ತಿರದ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ ಹಿಂಬಾಗದಲ್ಲಿ ನಿರ್ಮಿಸಲಾಗಿರುವ ಜಿಲ್ಲಾ ನಿರ್ಮಿತಿಕೇಂದ್ರದ ನೂತನ ಕಟ್ಟಡವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಉದ್ಘಾಟಿಸಿದರು.

ಬಳಿಕ ಜಿಲ್ಲಾ ನಿರ್ಮಿತಿ ಕೇಂದ್ರದ ನೂತನ ಕಟ್ಟಡದ ಗುಣಮಟ್ಟ, ವಿನ್ಯಾಸ, ಕಚೇರಿಯ ಕೊಠಡಿಗಳು, ಮುಂಭಾಗದ ಉದ್ಯಾನವನ ವೀಕ್ಷಿಸಿದ ಸಚಿವರು, ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಅವರು, ನಿರ್ಮಿತಿ ಕೇಂದ್ರವು ನಿರ್ಮಾಣ ಹಾಗೂ ತಾಂತ್ರಿಕತೆಯಲ್ಲಿ ತನ್ನದೇ ಆದ ಕೊಡುಗೆ ನೀಡುತ್ತಾ ಬಂದಿದೆ. ನೂತನ ತಂತ್ರಜ್ಞಾನ ಆಧಾರಿತ ಕಟ್ಟಡ ನಿರ್ಮಾಣ ವಸ್ತುಗಳ ಆವಿಷ್ಕಾರ–ತಯಾರಿಕೆ–ಬಳಕೆಗೆ ನಿರ್ಮಿತಿ ಕೇಂದ್ರ ಹೆಚ್ಚು ಒತ್ತು ನೀಡಿದೆ ಎಂದರು.

ನಿರ್ಮಿತಿ ಕೇಂದ್ರ ಜಿಲ್ಲೆಯ ಹಲವು ಪ್ರಮುಖ ಸರ್ಕಾರಿ ಕಟ್ಟಡಗಳನ್ನು ರೂಪಿಸಿದ ಹಿರಿಮೆ ಹೊಂದಿದೆ. ನೂತನ ತಂತ್ರಜ್ಞಾನ ಬಳಸಿ, ಅತೀ ಕಡಿಮೆ ವೆಚ್ಚದಲ್ಲಿ ಅಂದದ ಕಟ್ಟಡಗಳನ್ನು ನಿರ್ಮಿಸಿರುವುದು ಜಿಲ್ಲಾ ನಿರ್ಮಿತಿ ಕೇಂದ್ರದ ವೈಶಿಷ್ಟ್ಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಹೇಳಿದರು.

ಬೆಳಗಾವಿ ಉತ್ತರ ವಿಧಾನಸಭಾ ಮತಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಡಾ.ಭೀಮಾಶಂಕರ ಗುಳೇದ, ಜಿಲ್ಲಾ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಶೇಖರಗೌಡ ಕುರಡಗಿ ಸೇರಿದಂತೆ ಜಿಲ್ಲಾ ನಿರ್ಮಿತಿ ಕೇಂದ್ರದ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

## ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು: ವಿನಯ ನಾವಲಗಟ್ಟಿ

**ಬೆಳಗಾವಿ** : ಸರ್ಕಾರದ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹ ಜ್ಯೋತಿ, ಶಕ್ತಿ, ಯುವನಿಧಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಶ್ರಮಿಸಬೇಕು. ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂದಿಸಿದ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಮನ್ವಯದೊಂದಿಗೆ ಗ್ಯಾರಂಟಿ ಯೋಜನೆಗಳ ಸಮಿತಿ ಸದಸ್ಯರು ಕಾರ್ಯನಿರ್ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ತಿಳಿಸಿದರು.

ಜಿಲ್ಲಾಪಂಚಾಯತ್‌ಸಭಾಂಗಣದಲ್ಲಿಶುಕ್ರವಾರ (ಮಾ.28) ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಸಾರ್ವಜನಿಕರು ಹಾಗೂ ಫಲಾನುಭವಿಗಳೊಂದಿಗೆ ಮುಕ್ತ ಸಂವಾದ ನಡೆಸಬೇಕು. ಯೋಜನೆಗಳ ಪ್ರಯೋಜನ ಪಡೆಯುವಲ್ಲಿ ಫಲಾನುಭವಿಗಳು ಸಮಸ್ಯೆ ಎದುರಿಸುತ್ತಿದ್ದರೆ ತಕ್ಷಣ ಸ್ಪಂದಿಸಬೇಕು ಎಂದು ಹೇಳಿದರು.

ಯೋಜನೆಯಿಂದ ಹೊರಗುಳಿದಿರುವ ಅರ್ಹ ಫಲಾನುಭವಿಗಳನ್ನುಗುರುತಿಸಿ, ಯೋಜನೆಯ ಲಾಭ ದೊರಕಿಸಿಕೊಡುವ ನಿಟ್ಟಿನಲ್ಲಿ ಅಧಿಕಾರಿಗಳು,

ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಕಾರ್ಯಪ್ರವೃತ್ತರಾಗಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಮಾತನಾಡಿ ಓಟಿಪಿ ಮೂಲಕ ಪಡಿತರ ಪಡೆಯಲು ಈ ಮುಂಚೆ ಅನುಮತಿ ಇತ್ತು ಆದರೆ ದುರ್ಬಳಕೆ ಆಗುತ್ತಿರುವ ಕಾರಣ ಸರ್ಕಾರದಿಂದ ಓಟಿಪಿ ಮೂಲಕ ಪಡಿತರ ಪಡೆಯಲು ಬಯೋ ಮೆಟ್ರಿಕ್ ಕಡ್ಡಾಯಗೊಳಿಸಲಾಗಿದೆ. ಬಯೋಮೆಟ್ರಿಕ್ ತೊಂದರೆ ಇರುವ ಪಡಿತರದಾರರಿಗೆ ಮಾತ್ರ ಓಟಿಪಿ ಮೂಲಕ ಪಡಿತರ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳ ಸಮಿತಿಯ ಜಿಲ್ಲಾ, ತಾಲೂಕಾ ಅಧ್ಯಕ್ಷರು ಗ್ಯಾರಂಟಿ ಯೋಜನೆಗಳ



ತಾಲೂಕುವಾರು ಅನಿಸಿಕೆ ತಿಳಿಸಲು ಅಥವಾ ದೂರುಗಳನ್ನುನೋಂದಣಿಮಾಡಲುಗೂಗಲ್ ಸ್ಪ್ರೆಡ್ ಶೀಟ್ ಲಿಂಕ್ ಶೀಘ್ರದಲ್ಲೇ ಬಿಡುಗಡನೆ ಮಾಡಲಿದ್ದು, ಫಲಾನುಭವಿಗಳಿಗೆ ಯಾವುದೇ ರೀತಿಯಲ್ಲಿ ತೊಂದರೆ ಎದುರಾದಲ್ಲಿ ಲಿಂಕ್ ಮೂಲಕ ದೂರು ಸಲ್ಲಿಸಬಹುದಾಗಿದೆ.

ಸರ್ಕಾರದಿಂದ ಪಂಚ ಗ್ಯಾರಂಟಿ ಯೋಜನೆಗಳಡಿ ಪ್ರತಿ ಕುಟುಂಬಕ್ಕೆ ಸರಿ ಸುಮಾರು 10 ಸಾವಿರ ವರೆಗೆ ಆರ್ಥಿಕ ಹೊರೆ ಕಡಿಮೆಯಾಗಿದೆ. ಆಯಾ ಇಲಾಖೆಗಳಲ್ಲಿ ಕೆಲವು ತಾಂತ್ರಿಕ ತೊಂದರೆ ಇರುವ ಕಾರಣ ಫಲಾನುಭವಿಗಳು ಸಹಕರಿಸಲು ಗ್ಯಾರಂಟಿ ಸಮಿತಿ ಸದಸ್ಯರು ತಿಳಿಹೇಳಬೇಕು. ಆಯಾ ಇಲಾಖೆಯಿಂದ ನಿಗದಿತ ಅವಧಿಯೊಳಗೆ ತಾಂತ್ರಿಕ ದೋಷ ಸರಿಪಡಿಸಲಾಗುವುದು ಎಂದು ಹೇಳಿದರು.

ಯುವನಿಧಿ ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕೆ ತಾಲೂಕಾ ಮಟ್ಟದಲ್ಲಿ ಕಾಲೇಜುಗಳಿಗೆ ಗ್ಯಾರಂಟಿ ಸಮಿತಿ ಸದಸ್ಯರು ಭೇಟಿ ನೀಡಿ ಪದವೀಧರ ಮಾಹಿತಿ ಪಡೆದು ನೋಂದಣಿ ಮಾಡಿಕೊಳ್ಳದ ಅಭ್ಯರ್ಥಿಗಳಿಗೆ ನೋಂದಣಿ ಮಾಡಿಸಿಕೊಳ್ಳುವಂತೆ ಅಭಿಯಾನ ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಸಮಿತಿ ಬಗ್ಗೆ ಅಧಿವೇಶನದಲ್ಲಿ ಚರ್ಚೆಯಾಗಿದೆ. ಎಲ್ಲ ಪದಾಧಿಕಾರಿಗಳು ನಮ್ಮ ವ್ಯಾಪ್ತಿಯಲ್ಲಿ ಸಮಪರ್ಕವಾಗಿ ಕಾರ್ಯ ನಿರ್ವಹಿಸಬೇಕು. ಸರ್ಕಾರದ ವಿವಿಧ ಯೋಜನೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಎಲ್ಲ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಕಾರ್ಯ ನಿರ್ವಹಿಸಬೇಕು ಎಂದು ಜಿ.ಪಂ ಸಿಇಓ ರಾಹುಲ್ ಶಿಂಧೆ ತಿಳಿಸಿದರು.

ಖಾನಾಪೂರ ತಾಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಾತನಾಡಿ ಖಾನಾಪೂರ ತಾಲೂಕಿನ ಕೆಲವು ಪಡಿತರ ಅಂಗಡಿಗಳಲ್ಲಿ ಸರಿಯಾದ ತೂಕದಲ್ಲಿ ಪಡಿತರ ವಿತರಣೆ ಮಾಡುತ್ತಿಲ್ಲ. ವಿಚಾರಿಸಿದರೆ ಸಮಂಜಸವಲ್ಲದ ಉತ್ತರ ನೀಡುತ್ತಿದ್ದಾರೆ ಹಾಗಾಗಿ ಅಂತಹ ಅಂಗಡಿಗಳ ವಿರುದ್ಧ ದೂರುಗಳನ್ನು ಸ್ವೀಕರಿಸಿ ಕ್ರಮ ಜರುಗಿಸಬೇಕು ಎಂದು ವಿನಂತಿಸಿದರು.

ಈಗಾಗಲೇ ನೀಡಲಾಗುತ್ತಿರುವ 5 ಕೆ.ಜಿ ಅಕ್ಕಿ ಬದಲಿಗೆ ಹಣ ಸಂದಾಯ ಮಾಡಲಾಗುತ್ತಿದ್ದು, ಡಿಸೆಂಬರ್ ಮಾಹೆಯಲ್ಲಿ ಹಣ ನೀಡಲಾಗಿದೆ ಜನವರಿ ತಿಂಗಳು ಮಾತ್ರ ಬಾಕಿಯಿದೆ. ಫೆಬ್ರುವರಿ ತಿಂಗಳಿನಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ತಲಾ 5 ಕೆ.ಜಿ ಅಕ್ಕಿ ನೀಡಲಾಗುತ್ತಿದೆ ಎಂದು ಎಂದು ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ನಾಯಕ ವಿವರಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಅವರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ ನಿರ್ವಹಿಸಿದರು.

ಜಿಲ್ಲಾಪಂಚಾಯತ್‌ಸಹಾಯಕಕಾರ್ಯದರ್ಶಿ ರಾಹುಲ್ ಕಾಂಬಳೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್. ನಾಗರಾಜ್, ಹೆಸ್ಕಾಂ, ಸಾರಿಗೆ ಸಂಸ್ಥೆ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಗ್ಯಾರಂಟಿ ಯೋಜನೆಗಳ ವಿಷಯ ನಿರ್ವಾಹಕ ಪ್ರಶಾಂತ ಕಲ್ಲಪಗೌಡರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಗ್ರಾಪಂಗಳಲ್ಲಿ ವಿಕಲಚೇತನರಿಗೆ ವಿಶೇಷ ಜಾಬ್ ಕಾರ್ಡ್ ವಿತರಣೆ ಅಭಿಯಾನ

**ಬೆಳಗಾವಿ** : ಜಿಲ್ಲೆಯಲ್ಲಿರುವ ಅರ್ಹ ವಿಕಲಚೇತನರಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ವಿಶೇಷ ಜಾಬ್ಕಾರ್ಡ್ ವಿತರಣಾ ಅಭಿಯಾನವನ್ನು *ದಿನಾಂಕ: 01-04-2025 ರಿಂದ 15-04-2025 ರವರೆಗೆ 15 ದಿನಗಳಕಾಲ ಹಮ್ಮಿಕೊಳ್ಳಲಾಗಿದ್ದು*, ಈ ಅಭಿಯಾನದಲ್ಲಿ ಅರ್ಹರು ವಿಶೇಷ ಜಾಬ ಕಾರ್ಡ್ ಪಡೆಯಬಹುದು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

1995ರ ಕಾಯ್ದೆ (1996 ರ 1) ರಂತೆ ಸಮಾನ ಅವಕಾಶ, ಹಕ್ಕುಗಳ ರಕ್ಷಣೆ ಮತ್ತು ಪೂರ್ಣ ಸಹಭಾಗಿತ್ವ ಅಂಗವೈಕಲ್ಯ ಅಥವಾ ವಿವಿಧ ಅಶಕ್ತತೆ ಹೊಂದಿರುವ ವ್ಯಕ್ತಿಗಳನ್ನು ಅಂಗವಿಕಲರೆಂದು ಗುರುತಿಸುವಂತೆ ಶೇ. 40. ರಷ್ಟು ಅಂಗವೈಕಲ್ಯ ಹೊಂದಿರುವವರನ್ನು ಮನರೇಗಾ ಯೋಜನೆಯಲ್ಲಿ ಬರುವ ವಿಶೇಷ ವರ್ಗದ ದುರ್ಬಲ ಗುಂಪೆಂದು ಪರಿಗಣಿಸಲಾಗುತ್ತದೆ. ಈಗಾಗಲೇ ಬೆಳಗಾವಿ ಜಿಲ್ಲೆಯಲ್ಲಿ 10,800 ಜನ ವಿಕಲಚೇತನರು ಜಾಬ ಕಾರ್ಡ್ ಹೊಂದಿದ್ದಾರೆ. ಈ ಪೈಕಿ



2617 ಜನ ವಿಕಲಚೇತನರು ಮನರೇಗಾದಡಿ ಉದ್ಯೋಗ ಪಡೆದಿದ್ದಾರೆ. ಹಾಗಾಗಿ ಎಲ್ಲ ಅರ್ಹ ವಿಶೇಷಚೇತನರುವಿಶೇಷವರ್ಗದಜಾಬ್ಕಾರ್ಡ್ ಪಡೆಯಬಹುದು ಎಂದು ತಿಳಿಸಿದ್ದಾರೆ.

ಈಗಾಗಲೇ ಅನೇಕ ವಿಕಲಚೇತನರು ಕುಟುಂಬದ ಜಾಬ ಕಾರ್ಡ್ ಹೊಂದಿದ್ದು, ಅಂತಹವರು ಏಪ್ರಿಲ್ 1ರಂದು ವಿಶೇಷವರ್ಗದ ವಿಶೇಷ ಜಾಬ ಕಾರ್ಡ್ ಪಡೆಯುವ ಮೂಲಕ ವ್ಯಕ್ತಿಗತವಾಗಿ ಒಂದು ಆರ್ಥಿಕ ವರ್ಷದಲ್ಲಿ 100 ದಿನ ಕೆಲಸ ಪಡೆದುಕೊಳ್ಳಬಹುದಾಗಿದೆ. ಸದರಿಯವರಿಗೆ ಕೆಲಸದ ಪ್ರಮಾಣದಲ್ಲಿ ಶೇ 50 ರಷ್ಟು ರಿಯಾಯಿತಿ ಪಡೆದುಕೊಳ್ಳಬಹುದು. ವಿಕಲಚೇತನರಿಗೆ ಆರ್ಥಿಕ ಬಲ ನೀಡಬೇಕೆಂಬ ಉದ್ದೇಶದಿಂದ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಬೆಳಗಾವಿ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ಈ ಅಭಿಯಾನ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ನಿಮ್ಮ ಗ್ರಾಮ ಪಂಚಾಯತಿ, ಬೆಳಗಾವಿ ಮನರೇಗಾ ಸಹಾಯವಾಣಿ ಸಂಖ್ಯೆ 8073109488 ಅಥವಾ ರಾಜ್ಯ ಏಕೀಕೃತ ಸಹಾಯವಾಣಿ 8277506000 ಕ್ಕೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

ವಿಶೇಷ ಉದ್ಯೋಗ ಚೀಟಿ : ಮನರೇಗಾ ಯೋಜನೆಯಡಿ ಗ್ರಾಮೀಣ ಅರ್ಹ ಕುಟುಂಬಕ್ಕೆ ಒಂದು ಸಾಮಾನ್ಯ ಉದ್ಯೋಗ ಚೀಟಿ 100 ದಿನ ಕೆಲಸ ನೀಡಲಾಗುತ್ತಿದೆ. ಆದರೇ ವಿಶೇಷ ಚೇತನರನ್ನು ದುರ್ಬಲ ವರ್ಗವೆಂದು ಪರಿಗಣಿಸಿ ಅವರಿಗೆ ವಿಶೇಷ ಉದ್ಯೋಗ ಚೀಟಿ ನೀಡಿ ವ್ಯಕ್ತಿಗತವಾಗಿ 100 ದಿನ ಕೆಲಸ ಪಡೆಯಬಹುದು. ವಿಶೇಷ ಉದ್ಯೋಗ ಚೀಟಿ ಪಡೆದುಕೊಂಡ ವಿಕಲಚೇತನರ ಉದ್ಯೋಗ ಚೀಟಿಯಲ್ಲಿ ಕೇವಲ ಅವರಿಗೆ ಮಾತ್ರ ಕೆಲಸ ಮಾಡುವ ಅವಿಕಾಶವಿದೆ.

# ವಿಶ್ವ ಜಲ ದಿನಾಚರಣೆ: ನೀರನ್ನು ಮಿತವಾಗಿ ಬಳಸಲು ಕರೆ

**ಬೆಳಗಾವಿ** : ವಿಶ್ವ ಜಲ ದಿನಾಚರಣೆ ಅಂಗವಾಗಿ ಕೆ.ಯು.ಐ.ಡಿ.ಎಫ್.ಸಿ ಹಾಗೂ ಮಹಾನಗರ ಪಾಲಿಕೆಯ ಸಹಯೋಗದಲ್ಲಿ ಬೆಳಗಾವಿ ಉತ್ತರದ ಮಹಾವೀರ ನಗರದಲ್ಲಿ ಗಂಗಾ ಪೂಜೆ ಸಲ್ಲಿಸಲಾಯಿತು. ಮಹಾವೀರ ನಗರದಲ್ಲಿ ಕಳೆದ 10-12 ವರ್ಷಗಳಿಂದ ನೀರು ಸರಬರಾಜು ಕೊಳವೆ ಮಾರ್ಗವೇ ಇದ್ದಿರಲಿಲ್ಲ. ಕಳೆದ 6 ತಿಂಗಳ ಹಿಂದೆ ಕೊಳವೆ ಮಾರ್ಗವನ್ನು ಅಳವಡಿಸಿ ನೀರು ಪೂರೈಕೆ ಮಾಡಲಾಗುತ್ತಿದೆ. ಈ ಹಿನ್ನಲೆಯಲ್ಲಿ ಜನರಿಗೆ ನೀರಿನ ಮಹತ್ವ ಮತ್ತು ಸದ್ಬಳಕೆಯ ಅರಿವುಮೂಡಿಸಲು ವಿಶ್ವಜಲದಿನಾಚರಣೆಯನ್ನುಸ್ಥಳೀಯರ ಸಹಕಾರದಿಂದ ಆಚರಿಸಲಾಯಿತು.



ಮಾಹಿತಿ ಶಿಕ್ಷಣ ತಜ್ಞರು ಸೌಮ್ಯ ಎನ್. ಪಿ ವರು ಮಾತನಾಡಿ 24*7 ನೀರು ಸರಬರಾಜು ಯೋಜನೆಯ ಪ್ರಮುಖ ಅಂಶಗಳು, ಅದರಿಂದಾಗುವ ಮಹತ್ವಹಾಗೂ ನೀರಿನ ದರ ಮತ್ತು ಗ್ರಾಹಕರು ನೀಡಬೇಕಾದ ದಾಖಲೆಗಳ ಬಗ್ಗೆ ವಿವರಣೆ ನೀಡಿದರು.

ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಕಾಶ ಕೋಷ್ಠಿ ಮಾತನಾಡಿ ಜಲ ದಿನಾಚರಣೆಯನ್ನು 1993 ಮಾರ್ಚ 22 ರಿಂದ ಪ್ರತಿ ವರ್ಷ ಆಚರಿಸಲಾಗುತ್ತಿದೆ. ಈ ವರ್ಷ ಜಲದಿನಾಚರಣೆಯ ಘೋಷವ್ಯಾಖ್ಯೆ ಹಿಮನದಿಗಳನ್ನುಸಂರಕ್ಷಿಸೋಣಎಂಬುದರಬಗ್ಗೆಮಾಹಿತಿನೀಡಿನೀರನ್ನು ಯಾವ ಕಾರ್ಯಕ್ಕೆ ಎಷ್ಟು ಬಳಸಬೇಕೆಂಬುದರ ಬಗ್ಗೆ ಮಾಹಿತಿ ನೀಡಿದರು.

ಮಹಾವೀರ ನಗರದ ಗಣ್ಯರಾದ ವಿಜಯಕುಮಾರ ಕಿಲ್ಲೇದಾರರವರು ಮಾತನಾಡಿ, ಮಹಾವೀರ ನಗರಕ್ಕೆ ನೀರಿನ ವ್ಯವಸ್ಥೆ ಕಲ್ಪಿಸಲು ಸಹಕರಿಸಿದ ಶಾಸಕರಾದ ರಾಜು ಶೇಠ, ಮಹಾನಗರ ಪಾಲಿಕೆ, ಕೆಯುಐಡಿಎಫ್‌ಸಿ ಮತ್ತು ಎಲ್ &ಟಿರವರಿಗೆ ಕೃತಜ್ಞತೆ ಸಲ್ಲಿಸಿದರು. ಅಲ್ಲದೆ ನಾವೆಲ್ಲ ಮಿತವಾಗಿ ನೀರು ಬಳಸೋಣ, ಬಳಸಿದ ನೀರಿಗೆ ಸರಿಯಾದ ಸಮಯದಲ್ಲಿನೀರಿನಕರಪಾವತಿಸೋಣಎಂದರು.

ಮತ್ತೋರ್ವಅತಿಥಿಗಳಾದಬಿ.ಎಚ್.ಮುತ್ತಲಮುರಿ ಮಾತನಾಡಿ, ನೀರು ಮನುಷ್ಯನಿಗೆ ಎಷ್ಟು ಅಗತ್ಯವೆಂಬುದರ ಬಗ್ಗೆ ಮಾತನಾಡಿ ಆರೋಗ್ಯಕ್ಕೆ ಯಾವ ಪ್ರಮಾಣದಲ್ಲಿ ನೀರು ಸೇವಿಸಬೇಕು ಹಾಗೂ ಬೇಸಿಗೆ ಕಾಲದಲ್ಲಿ ನೀರನ್ನು ಹೇಗೆ ಬಳಸಬೇಕೆಂದು ತಿಳಿಸಿದರು.

ನೆರವು ಸಂಸ್ಥೆಯ ಸಿಬ್ಬಂದಿಗಳು ನೀರಿನ ಮಹತ್ವ ಕುರಿತು ಪ್ರಹಸನ ಪ್ರಸ್ತುತಪಡಿಸಿದರು. ನೀರಿನ ಸದ್ಬಳಕೆ ಕುರಿತು "ನಾನು ನೀರನ್ನು ಉಳಿಸಲು ಮತ್ತುಸಂರಕ್ಷಿಸಲುನೀರಿನವ್ಯವಸ್ಥೆಯನ್ನುರಕ್ಷಿಸಲುಮತ್ತುನನ್ನಕುಟುಂಬ, ನನ್ನ ಸಮುದಾಯ, ನನ್ನ ರಾಷ್ಟ್ರ ಮತ್ತು ಪ್ರಪಂಚದ ಹಿತ ದೃಷ್ಠಿಯಿಂದ ಜಾಗೃತಿ ಮೂಡಿಸಲು ಸಾಧ್ಯವಿರುವ ಎಲ್ಲವನ್ನೂ ಮಾಡಿತ್ತೇನೆ ಎಂಬ ಪ್ರಮಾಣ ವಚನ ಬೋಧಿಸಿದರು.

ವಿಶ್ವಜಲದಿನಾಚರಣೆಅಂಗವಾಗಿಕೆ.ಯು.ಐ.ಡಿ.ಎಫ್.ಸಿಹಾಗೂಎಲ್&ಟಿ ಯವರ ಸಹಯೋಗದಲ್ಲಿ ಅನಗೋಳ ಕೆರೆಯನ್ನುಸ್ವಚ್ಚಗೊಳಿಸಲಾಯಿತು. ಫಾತಿಮಾ ನಯಿಕವಾಡಿ, ಬಸವರಾಜ ಕುಂಬಾರ, ವಿಜಯಕುಮಾರ ಕಿಲ್ಲೇದಾರ, ಚಂದ್ರಕಾಂತ ಸಂಭಾಜಿ, ಸುನಂದಾ ಮುನವಳ್ಳಿ, ಪದ್ಮಾವತಿ, ಎ.ಎಚ್. ದೊಡ್ಡಮನಿ ಹಾಗೂ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಚಿಕ್ಕವಂಕಲಕುಂಟದಲ್ಲಿ ಒಣ ಗಾಂಜಾ ಜಪ್ತಿ: ಪ್ರಕರಣ ದಾಖಲು

**ಕೊಪ್ಪಳ** : ಚಿಕ್ಕವಂಕಲಕುಂಟ ಗ್ರಾಮದಲ್ಲಿ ಅಕ್ರಮವಾಗಿ ಮಾರಾಟಕ್ಕಾಗಿ ಸಂಗ್ರಹಿಸಿಟ್ಟಿದ್ದ ಒಣ ಗಾಂಜಾವನ್ನು ಗುರುವಾರ ಅಬಕಾರಿ ಇಲಾಖೆಯ ತಂಡವು ಜಪ್ತಿ ಮಾಡಿ, ಪ್ರಕರಣ ದಾಖಲಿಸಿಕೊಂಡಿದೆ.

ಅಬಕಾರಿ ಇಲಾಖೆಯ ಬೆಳಗಾವಿ ಕೇಂದ್ರಸ್ಥಾನ (ಜಾರಿ ಮತ್ತು ತನಿಖೆ) ಅಬಕಾರಿ ಅಪರ ಆಯುಕ್ತರು, ಹೊಸಪೇಟೆ ವಿಭಾಗದ ಅಬಕಾರಿ ಜಂಟಿ ಆಯುಕ್ತರು ಹಾಗೂ ಕೊಪ್ಪಳ ಜಿಲ್ಲೆ ಅಬಕಾರಿ ಉಪ ಆಯುಕ್ತರ ಮಾರ್ಗದರ್ಶನದಲ್ಲಿ ಹಾಗೂ ಅಬಕಾರಿ ಉಪ ಅಧೀಕ್ಷಕರಾದ ಭಾರತಿ ಅವರ ನೇತೃತ್ವದಲ್ಲಿ ಕುಷ್ಟಗಿ ವಲಯ ವ್ಯಾಪ್ತಿಯ ಯಲಬುರ್ಗಾ ತಾಲೂಕಿನ ಚಿಕ್ಕವಂಕಲಕುಂಟ ಗ್ರಾಮದ ಕುಂಟೆಪ್ಪ ಹಣಮಪ್ಪ ಪೂಜಾರಿ ರವರ ವಾಸದ ಮನೆ/ತಗಡಿನ ಶೆಡ್ಡಿನಲ್ಲಿ ಅಕ್ರಮವಾಗಿ ಮಾರಾಟಕ್ಕಾಗಿ ಸಂಗ್ರಹಿಸಿಟ್ಟಿದ್ದ ಒಟ್ಟು 188 ಗ್ರಾಂ ಒಣ ಗಾಂಜಾವನ್ನು ಜಪ್ತಿ ಪಡಿಸಿದ್ದು, ಈ ಆರೋಪಿಯ ವಿರುದ್ಧ ಎನ್.ಡಿ.ಪಿ.ಎಸ್ ಕಾಯ್ದೆಯ 1985 ರಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸುತ್ತಿದೆ.

ಈ ದಾಳಿಯಲ್ಲಿ ಅಬಕಾರಿ ಉಪ ಅಧೀಕ್ಷಕರಾದ ಭಾರತಿ, ಅಬಕಾರಿ ನೀರಿಕ್ಷಕ ಶಂಕರ ಗುಡದಾರ್, ಕೊಪ್ಪಳ ಉಪ ವಿಭಾಗದ ಅಬಕಾರಿ ಉಪ ನೀರಿಕ್ಷಕ ತಿಮ್ಮಯ್ಯ, ಹಿರೇವಂಕಲಾಕುಂಟ್ ಗ್ರಾಮ ಆಡಳಿತ ಅಧಿಕಾರಿ ಅಂಜು, ಅಬಕಾರಿಮುಖ್ಯಪೇದೆಗಳಾದಮೋಹನ್‌ಕುಮಾರ್‌ಹಾಗೂಹನಮಂತಪ್ಪ ಕುರಿ, ಗೃಹ ರಕ್ಷಕ ಶರಣಪ್ಪ ಸೇರಿದಂತೆ ಮತ್ತಿತರರು ಭಾಗವಹಿದ್ದರು.



# ಸಿಪಿಎಸ್ ಶಾಲೆಗೆ ನೀರು ಶುದ್ಧೀಕರಣ ಘಟಕ ಸ್ಥಾಪನೆ ಗೆ ಸುಷ್ಮಾ ಪತಂಗೆ ಚಾಲನೆ

**ಕೊಪ್ಪಳ** : ನಗರದ ಸಿಪಿಎಸ್ ಶಾಲೆ ಯ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವ ಆರ ಓ ಪ್ಲಾಂಟ್ ನ್ನು 2 ಲಕ್ಷ ರೂ ವೆಚ್ಚದಲ್ಲಿ ಕಿರ್ಲೋಸ್ಕರ್ ಕಾರ್ಖಾನೆ ಸಹಕಾರ ಮತ್ತು ಕೊಪ್ಪಳ ಇನ್ನರ್ ವೀಲ್ ಕ್ಲಬ್ ಪ್ರಯತ್ನದಿಂದ ಶಾಲೆಯಲ್ಲಿ ಯಶಸ್ವಿಯಾಗಿ ಅಳವಡಿಸಲಾಯಿತು,

ಕೊಪ್ಪಳ ಜಿಲ್ಲಾ ಇನ್ನರ್ ವೀಲ್ ಕ್ಲಬ್ ಜಿಲ್ಲಾ ಚೇರ್ಮೆನ್ ಸುಷ್ಮಾಪತಂಗೆ ರವರು ಬಟನ್ ಆನ್ ಮಾಡುವುದರ ಮೂಲಕ



ಚಾಲನೆ ನೀಡಿದರು,

ಇದರಿಂದಶಾಲೆಯಲ್ಲಿವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕ ವೃಂದಕ್ಕೆ ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ಬಳಕೆ ಆಗುತ್ತಿದೆಇದುಒಳ್ಳೆಯಬೆಳವಣಿಗೆ ಶಾಲೆಗೆ ಆರ್ ಓ ಪ್ಲಾಂಟ್ ಶುದ್ಧ ನೀರಿನ ಘಟಕ ಸ್ಥಾಪನೆ ಮಾಡಲು ಕಾರಣಕರ್ತರಾದ ಕಿರ್ಲೋಸ್ಕರ್ ಕಾರ್ಖಾನೆಯ ಮಂಡಳಿಯವರಿಗೆ ಸುಷ್ಮಾ ಪತಂಗೆ ರವರು ಕ್ಲಬ್ ಪರವಾಗಿ ಅಭಿನಂದಿಸಿದರು,

ಈ ಸಂದರ್ಭದಲ್ಲಿ ಕೊಪ್ಪಳ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷರಾದ ಉಮಾ ಮಹೇಶ್ ತಂಬ್ರಳ್ಳಿ ,ಕಾರ್ಯದರ್ಶಿ ಮೀನಾಕ್ಷಿ ಬಣ್ಣದ ಬಾವಿ, ಉಪಾಧ್ಯಕ್ಷರಾದ ಮಧು ಶೆಟ್ಟರ್, ಐ ಎಸ್ ಓ ಮಧು ನಿಲೋಗಲ್,

ಖಜಾಂಚಿ ಆಶಾ ಕವಲೂರು, ಎಡಿಟರ್ ನಾಗವೇಣಿ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರಾದ ಹಾಗೂ ಸುಜಾತ ಪಟ್ಟಣಶೆಟ್ಟಿ ಸೇರಿದಂತೆ ಸದಸ್ಯರು ಮಹಿಳೆಯರು ಕಾರ್ಯಕರ್ತರು ಮತ್ತು ಅಭಿಮಾನಿಗಳು ಅಲ್ಲದೆ ಶಿಕ್ಷಕರು ಪಾಲ್ಗೊಂಡಿದ್ದರು.

# ಕೊಪ್ಪಳ ಜಿಲ್ಲಾ ಮಟ್ಟದ ಸಾವಯವ ಮೇಳ ಹಾಗೂ ಚರ್ಚಾಗೋಷ್ಠಿ

## ಸಾವಯವ ಕೃಷಿಗೆ ಉತ್ತಮ ಮಾರುಕಟ್ಟೆ ಕಲ್ಪಿಸಲು ಕ್ರಮ: ಜಿಲ್ಲಾಧಿಕಾರಿ ನಲಿನ್ ಅತುಲ್

**ಕೊಪ್ಪಳ** : ಜಿಲ್ಲೆಯ ರೈತರು ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಲು ಮುಂದೆ ಬರಬೇಕು, ಸಾವಯವ ಕೃಷಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸಲು ಕೃಷಿ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರುಶುಕ್ರವಾರಕೊಪ್ಪಳಜಿಲ್ಲಾಡಳಿತಭವನದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾದ ಜಿಲ್ಲಾ ಮಟ್ಟದ ಸಾವಯವ ಮೇಳ ಹಾಗೂ ಚರ್ಚಾಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೃಷಿಯಲ್ಲಿ ಅತೀ ಹೆಚ್ಚು ರಾಸಾಯನಿಕಗಳ ಬಳಕೆಯಿಂದಾಗಿ ಭೂಮಿಯು ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತದೆ. ರಾಸಾಯನಿಕವಾಗಿ ಬೆಳೆದ ಕೃಷಿ ಪದಾರ್ಥಗಳ ಸೇವನೆಯಿಂದಾಗಿ ಜನರ ಆರೋಗ್ಯಕ್ಕೂ ತುಂಬಾ ಹಾನಿಕಾರವಾಗಿದ್ದು, ಭೂಮಿಯ ಸಂರಕ್ಷಣೆ, ಜನರ ಆರೋಗ್ಯಕ್ಕಾಗಿ ಸಾವಯವ ಕೃಷಿಯು ಇಂದಿನ ದಿನಮಾನಗಳಲ್ಲಿ ಬಹಳ ಮಹತ್ವವಾಗಿದೆ. ಗಂಗಾವತಿ, ಕಾರಟಗಿ, ಕನಕಗಿರಿ, ಕೊಪ್ಪಳ ತಾಲ್ಲೂಕಿನ ಕೆಲ ಭಾಗ ಸೇರಿ ನಮ್ಮ ಜಿಲ್ಲೆಯಲ್ಲಿ ಸುಮಾರು 3 ಲಕ್ಷ ಎಕರೆಗೂ ಅಧಿಕ ಪ್ರದೇಶದಲ್ಲಿ ಭತ್ತ ಬೆಳೆಯಲಾಗುತ್ತದೆ. ಸಾವಯವ ಕೃಷಿಗೆ ತುಂಬಾ ಬೇಡಿಕೆಯಿದ್ದು, ಹಾಗಾಗಿ ರೈತರಿಗೆ ಅರಿವು ಮೂಡಿಸಲು ಕೃಷಿ ಇಲಾಖೆಯಿಂದ ಈ ಸಾವಯವ ಕೃಷಿ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಸಾವಯವ ಪದಾರ್ಥಗಳಿಗೆ ಹೆಚ್ಚು ಬೇಡಿಕೆಯಿದ್ದು, ರೈತರು ಸಾವಯವ ಕೃಷಿ ಪದ್ಧತಿಯಲ್ಲಿ ಬೆಳೆದ ಬೆಳೆಗಳನ್ನು ಒಂದು ಬ್ರ್ಯಾಂಡಿಂಗ್ ಮಾಡಿದರೇ ಒಳ್ಳೆಯ ಬೆಲೆ ಸಿಗಲಿದೆ. ಇದರಿಂದ ಗ್ರಾಹಕರಿಗೂ ಉತ್ತಮ ಆರೋಗ್ಯ ದೊರೆಯುತ್ತದೆ. ಕೊಪ್ಪಳ ಜಿಲ್ಲೆಯಲ್ಲಿ ಸಮಗ್ರ ಸಾವಯಕ ಕೃಷಿ ಪದ್ಧತಿಯನ್ನು ಜಾರಿಗೆ ಮಾಡಲು ಮುಂಬರುವ ಐದು ವರ್ಷದಲ್ಲಿ ಏನು ಮಾಡಬೇಕೆಂಬುವುದಕ್ಕೆ ಯೋಜನೆಗಳನ್ನು ರೂಪಿಸಲಾಗುತ್ತಿದೆ. ಜಿಲ್ಲೆಯಲ್ಲಿ ತೋಟಗಾರಿಕೆಗೂ ಉತ್ತಮ ಅವಕಾಶವಿದ್ದು, ನಮ್ಮ ಜಿಲ್ಲೆ ಹಾಗೂ ಉತ್ತರ ಕರ್ನಾಟಕ ಭಾಗಗಳಲ್ಲಿ ಬೆಳೆಯುತ್ತಿರುವ ಹಣ್ಣುಗಳಿಗೆ ತುಂಬಾ ಬೇಡಿಕೆಯಿದೆ. ರೈತರು ತಮ್ಮ ಜಮೀನಿನ ಶೇ.40 ರಷ್ಟು ಭಾಗದಲ್ಲಿ ತೋಟಗಾರಿಕೆ ಅಳವಡಿಸಿಕೊಳ್ಳಬೇಕು. ಇದಕ್ಕಾಗಿ ಜಿಲ್ಲೆಯ ತೋಟಗಾರಿಕೆ ಇಲಾಖೆಯುವ ಹಲವಾರು ಮೇಳಗಳನ್ನು ಹಮ್ಮಿಕೊಂಡು ರೈತರಿಗೆ ಈ ಕುರಿತು ಅರಿವು ಮೂಡಿಸುತ್ತಿದೆ ಎಂದು ಹೇಳಿದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರು ಮಾತನಾಡಿ, ಜಿಲ್ಲೆಯಲ್ಲಿ 2 ಲಕ್ಷ 80 ಸಾವಿರ ರೈತರು ಹಾಗೂ 4 ಲಕ್ಷ



30 ಸಾವಿರ ಹೆಕ್ಟರ್ ಕೃಷಿ ಭೂಮಿಯಿದ್ದು, ಇದರಲ್ಲಿ 4 ಸಾವಿರ ಹೆಕ್ಟರ್ ಜಮೀನಿನಲ್ಲಿ 3 ಸಾವಿರ ರೈತರು ಮಾತ್ರ ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡಿದ್ದಾರೆ. ಸಾವಯವ ಕೃಷಿಯನ್ನು ಹೆಚ್ಚಿಸಲು ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಅಳವಂಡಿ ಭಾಗದಲ್ಲಿನ ಒಬ್ಬ ರೈತನು ತನ್ನ 5 ರಿಂದ 10 ಎಕರೆ ಜಮೀನಿನಲ್ಲಿ ಕಳೆದ ಮೂರು ವರ್ಷದಿಂದ ಸಾವಯವ ಕೃಷಿ ಪದ್ಧತಿಯನ್ನು ಕೈಗೊಂಡು ದಾಳಿಂಬೆ ಬೆಳೆದು ರೂ. 30 ರಿಂದ 40 ಲಕ್ಷದವರೆಗೆ ಲಾಭ ಪಡೆದಿದ್ದಾರೆ. ಭವಿಷ್ಯದಲ್ಲಿ ಸಾವಯವ ಕೃಷಿಗೆ ಅತ್ಯಂತ ಮಹತ್ವದ ಬೇಡಿಕೆಯಿದ್ದು, ರೈತರು ಸಾವಯವ ಕೃಷಿ ಮಾಡಲು ಮುಂದೆ ಬರಬೇಕು. ಸಾವಯವ ಕೃಷಿಯು ಕೇವಲ ಒಂದೇ ಬೆಳೆಗೆ ಮಾತ್ರ ಸಿಮಿತವಾಗದೇ, ವಿವಿಧ ಬೆಳೆಗಳನ್ನು ಬೆಳೆಯುವುದರ ಜೊತೆಗೆ ಹೈನುಗಾರಿಕೆ, ಪಶುಪಾಲನೆ, ಕೋಳಿ ಸಾಕಾಣಿಕೆಯಂತಹ ಚಟುವಟಿಕೆಗಳಿಗೂ ಸಹಾಯಕವಾಗುತ್ತದೆ ಎಂದರು.

ಜಿಲ್ಲಾಕೃಷಿಕಸಮಾಜದಅಧ್ಯಕ್ಷರಾದಶೇಖರಗೌಡ ಮಾಲಿ ಪಾಟೀಲ್ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕೃಷಿಯಲ್ಲಿ ರಸಾಯನಿಕ ಗೊಬ್ಬರಗಳ ಬಳಕೆ ಹೆಚ್ಚಾಗಿದೆ. ಇದರಿಂದ ಕೃಷಿ ಭೂಮಿ ತನ್ನ ಫಲವತ್ತತೆ ಕಳೆದುಕೊಳ್ಳುತ್ತಿದೆ. ಸಾವಯವ ಕೃಷಿಗೆ ಸರ್ಕಾರವು ಹೆಚ್ಚಿನ ಉತ್ತೇಜನ ನೀಡುತ್ತಿದೆ. ಕೊಪ್ಪಳ ಜಿಲ್ಲೆಯಲ್ಲಿ ಸಾವಯವ ಕೃಷಿ ಪ್ರಮಾಣವು ಹೆಚ್ಚಾಗಬೇಕು. ಈ ಹಿನ್ನೆಲೆಯಲ್ಲಿ ಇಂತಹ ಕಾರ್ಯಕ್ರಮಗಳು ಜಿಲ್ಲೆಯಾದ್ಯಂತ ಹಮ್ಮಿಕೊಂಡು, ರೈತರಿಗೆ ಅರಿವು ಮೂಡಿಸಬೇಕು. ಇದಕ್ಕೆ ಜಿಲ್ಲಾ ಕೃಷಿಕ ಸಮಾಜವು ಕೃಷಿ ಇಲಾಖೆಯೊಂದಿಗೆ ಕೈಜೋಡಿಸಲಿದೆ ಎಂದು ಹೇಳಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಟಿ.ಎಸ್. ರುದ್ರೇಶಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಸಾವಯವ ಕೃಷಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒತ್ತು ನೀಡುತ್ತಿವೆ. ಕೃಷಿಯಲ್ಲಿ ಅತಿ ಹೆಚ್ಚು ರಾಸಾಯನಿಕ ಉಪಯೋಗದಿಂದ ನೀರು. ಭೂಮಿ ಮಣ್ಣಿನ ಫಲವತ್ತತೆ ಕಲುಷಿತವಾಗುವುದರ ಜೊತೆಗೆ ಪ್ರಾಣಿಗಳು ಹಾಗೂ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಹಾಗಾಗಿ ರೈತರು ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕೆಂದು ಹೇಳಿದರು.

ಐಎಟಿ ರಾಜ್ಯ ಕಾರ್ಯದರ್ಶಿ ವಿ.ಕೆ. ಕಮತರ ಅವರು ಮಾತನಾಡಿ, ಸಾವಯವ ಕೃಷಿಯ ಕಡೆಗೆ ನಾವು ಗಮನಹರಿಸಬೇಕಿದೆ. ನಮ್ಮ ದೇಶದಲ್ಲಿ ಅತಿ ಹೆಚ್ಚು ಉತ್ಪಾದನೆ ಮಾಡುವ ಪಂಜಾಬ ರಾಜ್ಯದಲ್ಲಿ ಹೆಚ್ಚಿನ ಕ್ಯಾನ್ಸರ್ ರೋಗಿಗಳು ಸಿಗುತ್ತಾರೆ. ಅವರು ಹತ್ತು ಇಪ್ಪತ್ತು ವರ್ಷಗಳ ಹಿಂದೆ ಕೃಷಿಯಲ್ಲಿ ಹೆಚ್ಚು ರಸಾಯನಿಕ ಬಳಸಿದ ಪರೀಣಾಮ ಅದು ಆಗಿರುವುದು. ನಮ್ಮ ಆರೋಗ್ಯ ಚೆನ್ನಾಗಿ ಇರಬೇಕಾದರೆ ನಾವು ಸಾವಯವ ಕೃಷಿಯ ಕಡೆಗೆ ನಡೆಯಬೇಕಿದೆ ಎಂದು ಹೇಳಿದರು.

ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಸಾವಯವ ವಿಭಾಗದ ಮುಖ್ಯಸ್ಥರಾದ ಡಾ.ಬಸವಣ್ಣೆಪ್ಪ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕೃಷಿಯಲ್ಲಿ ಮಹಿಳೆಯರ ಪಾತ್ರವು ಬಹಳ ಪ್ರಮುಖವಾಗಿದೆ. ರೈತರಿಗೆ ಕೃಷಿಯಲ್ಲಿನಮಗಿಂತಅವರಿಗೆಹೆಚ್ಚಿನಅನುಭವ ಇರುತ್ತದೆ. ಅವರೇ ಪ್ರಥಮ ವಿಜ್ಞಾನಿಗಳು. ಬೆವರು ಸುರಿಸಿ ಕೆಲಸ ಮಾಡುವ ರೈತರಿಗೆ ಯಾವುದೇ ಕಾಯಿಲೆ ಬರುವದಿಲ್ಲ. ಸಾವಯವ ಕೃಷಿ ಮಾಡುವವರಿಗೆ ಸಾವಿಲ್ಲ. ಅವರು 80 ರಿಂದ 90 ವರ್ಷಗಳ ಕಾಲ ಬದುಕುತ್ತಾರೆ. ರಾಗಿ ತಿಂದವನು ನಿರೋಗಿ. ಸಿರಿಧಾನ್ಯಗಳ ಸೇವನೆಯಿಂದ ಹಲವಾರು ಕಾಯಿಲೆಗಳು ದೂರವಾಗುತ್ತವೆ ಎಂದು ಹೇಳಿದರು.

**ಸನ್ಮಾನ:** ರಾಜ್ಯ ಮಟ್ಟದಲ್ಲಿ ಉದಯೋನ್ಮುಖ ಕೃಷಿ ಪ್ರಶಸ್ತಿ ಪಡೆದ ಕೊಪ್ಪಳ ಜಿಲ್ಲೆಯ ರೈತರಾದ ಬಸಯ್ಯ ಹಿರೇಮಠ, ವೆಂಕಟೇಶರಾವ್, ಶ್ರೀನಿವಾಸರಾವ್‌ದೇಸಾಯಿ,ಅಜಯಕುಮಾರ್ ಪಾಟೀಲ್ ಅವರಿಗೆ ಇದೇ ಸಂದರ್ಭದಲ್ಲಿ ಗಣ್ಯರಿಂದ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಶಿವಣ್ಣ ಮೂಲಿಮನಿ, ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಬೋರ್ಡ್ ಸದಸ್ಯರಾದ ತಿಮ್ಮಣ್ಣ ಚೌಡಿ, ಕೊಪ್ಪಳ ಕೃಷಿ ಇಲಾಖೆ ಉಪನಿರ್ದೇಶಕ ಎಲ್.ಸಿದ್ದೇಶ, ಕೃಷಿಕ ಸಮಾಜದ ಸದಸ್ಯರು ಹಾಗೂ ಪ್ರಗತಿಪರ ರೈತರಾದ ವೀರುಪಾಕ್ಷಪ್ಪ ನವೋದಯ, ಗಂಗಾವತಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ನಾರಪ್ಪ, ಸಹಾಯಕ ಕೃಷಿ ನಿರ್ದೇಶಕರಾದ ಶಶಿಕಲಾ ಹಾಗೂ ಶೇತ್ವಾ ಮತ್ತು ವಿವಿಧ ಇಲಾಖೆಗಳ ಮತ್ತು ಕೃಷಿ ಇಲಾಖೆಯ ಇತರೆ ಅಧಿಕಾರಿ, ಸಿಬ್ಬಂದಿಗಳು, ಜಿಲ್ಲೆಯ ರೈತ ಮುಖಂಡರು, ರೈತರು, ಕೃಷಿ ಸಖಿಯರು, ಪಶುಸಖಿಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆ

## ಗ್ಯಾರಂಟಿ ಯೋಜನೆಗಳ ಸಮಸ್ಯೆಗಳನ್ನು ಸ್ಥಳೀಯ ಹಂತದಲ್ಲಿಯೇ ಪರಿಹರಿಸಲು ಕ್ರಮ: ರೆಡ್ಡಿ ಶ್ರೀನಿವಾಸ

**ಕೊಪ್ಪಳ :** ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಗ್ರಾಮೀಣ ಮತ್ತು ಹೋಬಳಿ ಹಂತದಲ್ಲಿ ಪ್ರಗತಿ ಪರಿಶೀಲನಾ ಸಭೆಗಳನ್ನು ಕೈಗೊಂಡು 'ಗ್ಯಾರಂಟಿಯೋಜನೆಗಳನಡೆಗ್ರಾಮ ಪಂಚಾಯತಿ ಕಡೆ' ಕಾರ್ಯಕ್ರಮದ ಮೂಲಕ ಸಮಸ್ಯೆಗಳನ್ನು ಸ್ಥಳೀಯ ಹಂತದಲ್ಲಿಯೇ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು.



ಅವರು ಶನಿವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಜ್ಯ ಸರ್ಕಾರವು ಜಾರಿಗೊಳಿಸಿರುವ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳು ಬಡ, ಹಿಂದುಳಿದ ವರ್ಗಗಳ ಹಾಗೂ ಜನ ಸಾಮಾನ್ಯರ ಬಧುಕಿಗೆ ಆಸರೆಯಾಗಿವೆ. ಈ ಯೋಜನೆಗಳಡಿ ಅರ್ಹರಿ ಜಿಲ್ಲೆಯ ಯಾವುದೇ ಅರ್ಹ ಫಲಾನುಭವಿಗಳು ಹೊರಗುಳಿಯದಂತೆ ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಈ ಹಿನ್ನೆಲೆಯಲ್ಲಿ ಯೋಜನೆಗಳ ಅನುಷ್ಠಾನದಲ್ಲಿ ಇರುವ ಸಣ್ಣಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲು ಗ್ರಾಮ ಪಂಚಾಯತ್ ಮತ್ತು ಹೋಬಳಿ ಹಂತದಲ್ಲಿ ಫಲಾನುಭವಿಗಳ ಜತೆಗೆ ಸಮಾಲೋಚನೆ ಮಾಡಿ, ಅವರಿಗಾಗಿರುವ ಸಮಸ್ಯೆಗಳ ಕುರಿತು ಚರ್ಚಿಸಿ ಸ್ಥಳೀಯ ಸಮಸ್ಯೆಗಳನ್ನ ಸ್ಥಳದಲ್ಲಿಯೇ ಪರಿಹಾರ ನೀಡಲಾಗುವುದು. ಈ ಬಗ್ಗೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಡ್ಯಾಶ್‌ಬೋರ್ಡ್‌ಸಮಸ್ಯೆಯಿಂದಾಗಿ5ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಕುರಿತು ನಿಖರವಾದ ಮಾಹಿತಿ ದೋರೆಯುತ್ತಿಲ್ಲ. ಈ ಸಮಸ್ಯೆಯನ್ನು ಆದಷ್ಟು ಬೇಗ ಬಗೆಹರಿಸಬೇಕು. ಗೃಹ ಲಕ್ಷ್ಮೀ ಯೋಜನೆಯ ಮೂಲಕ 2024ರ ಡಿಸೆಂಬರ್ ಮಾಹೆಯ ವರೆಗೆ 3 ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಒಟ್ಟು 1030 ಕೋಟಿ 27 ಲಕ್ಷದ 78 ಸಾವಿರ ರೂಪಾಯಿ ಮಹಿಳೆಯರಿಗೆ ಡಿಬಿಟಿ ಮೂಲಕ ನೇರವಾಗಿ ಪಾವತಿಸಲಾಗಿದೆ. ಈ ಯೋಜನೆಯಡಿ 2025ರ ಫೆಬ್ರವರಿಯಲ್ಲಿ 598 ಕ್ಕಿಂತ ಹೆಚ್ಚು ನೋಂದಣಿಯಾಗಿದೆ.

ಅನ್ನ ಭಾಗ್ಯ ಯೋಜನೆಯ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುತ್ತಿರುವುದು ಬೆಳಕಿಗೆ ಬಂದಿದ್ದು, ಹಾಗಾಗಿ ಅಕ್ರಮ ಅಕ್ಕಿ ಸಾಗಾಣಿಕೆಗೆ ಕಡಿವಾಣ ಹಾಕಲು ಕಠಿಣ ಕ್ರಮ ಕೈಗೊಳ್ಳಬೇಕು.

ಅನ್ನಭಾಗ್ಯಯೋಜನೆಯಅಕ್ಕಿಯನ್ನುಮಾರಾಟ ಮಾಡಿದರೆ, ಅಂತಹ ಫಲಾನುಭವಿಗಳ ಪಡಿತರ ಚೀಟಿಯನ್ನು ರದ್ದುಪಡಿಸಲು ಅವಕಾಶವಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಿಸಿ ಕ್ಯಾಮರಾ ಅಳವಡಿಸಲು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ರೂ. 10 ಕೋಟಿ ಅನುದಾನ ನೀಡಿದ್ದಾರೆ.

ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಸಿಸಿ ಕ್ಯಾಮರಾ ಅಳವಡಿಕೆಗೆ ಕ್ರಮ ವಹಿಸಬೇಕು ಎಂದರು.

ಐದುಗ್ಯಾರಂಟಿಯೋಜನೆಗಳಪ್ರಗತಿ:ಗೃಹಲಕ್ಷ್ಮೀ ಯೋಜನೆಯಡಿ ಕೊಪ್ಪಳ ಜಿಲ್ಲೆಯ 3,13,663 ಫಲಾನುಭವಿಗಳಿಗೆ ಡಿಸೆಂಬರ್-2024ರ ಅಂತ್ಯದವರೆಗೆ ಡಿಬಿಟಿ ಮೂಲಕ 1030.27 ಕೋಟಿ ರೂ.ಗಳನ್ನು ಪಾವತಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಫೆಬ್ರವರಿ-2025ರ ಅಂತ್ಯದವರೆಗೆ 2,77,392 ಗ್ರಾಹಕರಿಗೆ ಉಚಿತ ವಿದ್ಯುತ್ ಸೌಲಭ್ಯ ದೊರೆತಿದ್ದು, ಇದಕ್ಕಾಗಿ 219.25 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. ಅನ್ನಾಭಾಗ್ಯ ಯೋಜನೆಯಡಿ ಹೆಚ್ಚುವರಿ ಅಕ್ಕಿಯ ಬದಲಿಗೆ ಡಿಸೆಂಬರ್-2024ರ ಅಂತ್ಯದವರೆಗೆ 2,99,213 ಕಾರ್ಡುದಾರರಿಗೆ 18,39,92,530 ರೂ.ಗಳ ವೆಚ್ಚ ಭರಿಸಲಾಗಿರುತ್ತದೆ. ಶಕ್ತಿಯೋಜನೆಯಡಿ ಫೆಬ್ರವರಿ-2025ರ ಅಂತ್ಯದವರೆಗೆ 6 ಕೋಟಿ 70 ಲಕ್ಷದ 2 ಸಾವಿರ 872 ಮಹಿಳೆಯರು ಕಲ್ಯಾಣ ಕರ್ನಾಟ ರಸ್ತೆ ಸಾರಿಗೆ ಸಂಸ್ಥೆಗೆ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಇದಕ್ಕಾಗಿ 2,35,51,247 ರೂ.ಗಳ ಖರ್ಚಾಗಿದೆ.

ಯುವನಿಧಿ ಯೋಜನೆಯಡಿ ಇಲ್ಲಿಯವರೆಗೆ (ಮಾರ್ಚ್-2025) 8441 ನೋಂದಣಿಯಾಗಿದ್ದು, ಒಟ್ಟು ಮೊತ್ತ ರೂ. 10.05 ಕೋಟಿಗಳನ್ನು ಪಾವತಿಸಲಾಗಿರುತ್ತದೆ ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಗುರುತಿನಿ ಚೀಟಿ ವಿತರಣೆ: ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಮತ್ತು ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರುಗಳಿಗೆ ಸಿಇಓ ಅವರು ಗುರುತಿನ ಚೀಟಿಗಳನ್ನು ವಿತರಣೆ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ ಖಾದ್ರಿ, ನಾಗರಾಜ್ ಅರಳಿ, ಅಮರೇಶ ಎಸ್ ಗಾಂಜಿ, ಮಂಜುನಾಥ ಗೋಂಡಬಾಳ,

ಗ್ಯಾರಂಟಿ ಯೋಜನೆಗಳ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಸೇರಿದಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು,

ತಾಲ್ಲೂಕು ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಮಾ ಪಾಲಿಸಿ ಪರಿಹಾರ ಪಾವತಿಸಲು ಇನ್ಸೂರೆನ್ಸ್ ಕಂಪನಿಗೆ ಆದೇಶ

**ಕೊಪ್ಪಳ:** ಫಿರ್ಯಾದುದಾರರಿಗೆ ವಿಮಾ ಪಾಲಿಸಿ ಪರಿಹಾರ ಪಾವತಿಸಲು ಕೊಪ್ಪಳ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಇನ್ಸೂರೆನ್ಸ್ ಕಂಪನಿಗೆ ಆದೇಶ ನೀಡಿದೆ.

ಗ್ರಾಹಕ ಫಿರ್ಯಾದು ಸಂಖ್ಯೆ: 32/2024 ರಲ್ಲಿನ ಅಂತಿಮ ತೀರ್ಪಿನ ಸಾರಾಂಶದನ್ವಯ ಫಿರ್ಯಾದುದಾರರಾದ ಪಾರ್ವತಿ ಗಂಡ ದಿ:ಯಂಕಪ್ಪ ಸಾ:ವರನಖೇಡ್, ಹುಲಿಹೈದರ್, ತಾ:ಕನಕಗಿರಿ ಇವರ ಗಂಡನಾದ ದಿ.ಯಂಕಪ್ಪ ಇವರು ತಮ್ಮ ಜೀವಿತ ಕಾಲದಲ್ಲಿ ದಿ: 2-10-2023 ರಂದು ಎದುರುದಾರರಾದ ಹೆಚ್.ಡಿ.ಎಫ್.ಸಿ ಸ್ಟ್ಯಾಂಡರ್ಡ್ ಲೈಫ್ ಇನ್ಸೂರೆನ್ಸ್ ಕಂಪನಿ ಲಿಂ. ಮುಂಬೈ (HDFC Standad Life Insurance Company Ltd., Mumbai) ಇವರಲ್ಲಿ ಅರ್ಧವಾರ್ಷಿಕ ಪ್ರಿಮಿಯಂ ರೂ.1,50,000 ಗಳನ್ನು ಪಾವತಿಸಿ ಜೀವ ವಿಮಾ ಪಾಲಸಿಯನ್ನು ಪಡೆದುಕೊಂಡಿದ್ದರು. ಆದರೆ ಪಾಲಸಿದಾರರಾದ ಯಂಕಪ್ಪ ಇವರು ದಿನಾಂಕ: 21-01-2024 ರಂದು ಹೃದಯಘಾತದಿಂದ ನಿಧನ ಹೊಂದಿರುತ್ತಾರೆ. ನಾಮಿನಿಯಾದ ಪಾಲಸಿದಾರರ ಪತ್ನಿ ಪಾರ್ವತಿ ಎದುರುದಾರ ಜೀವ ವಿಮಾ ಕಂಪನಿಯಲ್ಲಿ ಜೀವ ವಿಮಾ ಪಾಲಸಿಯನ್ನು ಪಡೆದ ವಿಷಯ ತಿಳಿದು ಕ್ಲೇಮ್ ಫಾರ್ಂಭರ್ತಿಮಾಡಿ,ಎಲ್ಲಾದಾಖಲಾತಿಗಳನ್ನು ಎದುರುದಾರರ ಕಂಪನಿಗೆ ನೀಡಿ ವಿಮಾ ಪರಿಹಾರ ಮೊತ್ತ ರೂ. 43,36,636 ಗಳನ್ನು ಪಾವತಿಸುವಂತೆ ವಿನಂತಿಸಿಕೊಂಡಿರುತ್ತಾರೆ.

ಎದುರುದಾರ ವಿಮಾ ಕಂಪನಿಯವರು ಈ ಕ್ಲೇಮ್‌ನ್ನು ಸ್ವೀಕರಿಸಿ ದೂರುದಾರಳಾದ ಪಾರ್ವತಿ ಗಂಡ ದಿ:ಯಂಕಪ್ಪ ಅವರು ಈ ಪಾಲಸಿಯನ್ನು ಪಡೆಯುವ ಸಂದರ್ಭದಲ್ಲಿ ಅನಾರೋಗ್ಯ ಪೀಡಿತರಾಗಿದ್ದರು ಮತ್ತು ಮಧ್ಯವಸ್ಯನಿಯಾಗಿದ್ದರೆಂದು ತಿಳಿದು ಬಂದಿರುವುದೆಂಬ ಕಾರಣಕ್ಕೆ ಪಾಲಸಿಯ ಕ್ಲೇಮ್‌ನ್ನು ತಿರಸ್ಕಾರ ಮಾಡಿರುತ್ತಾರೆ. ದೂರುದಾರರಿಗೆ ಎದುರುದಾರರುವಿಮಾಪಾಲಸಿಯಪರಿಹಾರದ ಮೊತ್ತವನ್ನು ನೀಡದೇ ನಿರ್ಲಕ್ಷ ತೋರಿ ಸೇವಾ ನ್ಯೂನತೆಎಸಗಿದ್ದರಿಂದದೂರುದಾರಳುಕೊಪ್ಪಳ ಜಿಲ್ಲಾಗ್ರಾಹಕರವ್ಯಾಜ್ಯಗಳಪರಿಹಾರಅಯೋಗಕ್ಕೆ ವಿಮಾ ಕಂಪನಿ ವಿರುದ್ಧ ಪರಿಹಾರವನ್ನು ಕೋರಿ ದೂರನ್ನು ಸಲ್ಲಿಸಿರುತ್ತಾರೆ.

ಕೊಪ್ಪಳ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ದೂರನ್ನು ದಾಖಲಿಸಿಕೊಂಡ ನಂತರ ಜಿಲ್ಲಾ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮಿ ಹಾಗೂ ಸದಸ್ಯರಾದ ರಾಜು. ಎನ್.ಮೇತ್ರಿ ಅವರು ವಾದ ಪ್ರತಿವಾದಗಳನ್ನು ಆಲಿಸಿ, ಎದುರುದಾರರಿಂದ ಸೇವಾ ನ್ಯೂನತೆ ಉಂಟಾಗಿರುವುದು ಸಾಬೀತಾಗಿರುವುದರಿಂದ ದೂರುದಾರರಿಗೆ ಎದುರುದಾರರು ಜೀವ ವಿಮಾ ಪಾಲಸಿ ಒಟ್ಟು ಮೊತ್ತ ರೂ. 43,36,636 ಪರಿಹಾರಗಳಿಗೆ ವಾರ್ಷಿಕ ಶೇ.6ರ ಬಡ್ಡಿ ಸಮೇತ ದೂರಿನ ದಿನಾಂಕದಿಂದ ಪಾವತಿಯಾಗುವವರೆಗೆ ನೀಡುವಂತೆ ಆದೇಶಿಸಿರುತ್ತಾರೆ. ಹಾಗೂ ದೂರುದಾರರಿಗೆ ಉಂಟಾದ ಮಾನಸಿಕ ಯಾತನೆಗಾಗಿ ರೂ. 5,000 ಗಳನ್ನು ಹಾಗೂ ದೂರಿನ ಖರ್ಚು ರೂ. 5,000 ಗಳನ್ನು ಈ ಅದೇಶದ ದಿನಾಂಕದಿಂದ 45 ದಿನಗಳ ಒಳಗಾಗಿ ಎದುರುದಾರರು ದೂರುದಾರರಿಗೆ ಪಾವತಿಸುವಂತೆ ಆದೇಶವನ್ನು ನೀಡಿರುತ್ತಾರೆ ಎಂದು ಕೊಪ್ಪಳ ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ರಿಜಿಸ್ಟ್ರಾರ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಹನಗಳ ನೋಂದಣಿ, ಚಾಲನಾ ಅನುಜ್ಞಾ ಪತ್ರಗಳ ನೀಡಿಕೆ: ಗಂಗಾವತಿಯಲ್ಲಿ ಮಾಸಿಕ ಕ್ಯಾಂಪ್

**ಕೊಪ್ಪಳ :** ವಾಹನಗಳ ನೋಂದಣಿ ಹಾಗೂ ಚಾಲನಾ ಅನುಜ್ಞಾ ಪತ್ರಗಳ ನೀಡಿಕೆ ಕುರಿತಂತೆ ಕೊಪ್ಪಳ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಗಂಗಾವತಿಯ ಎಪಿಎಂಸಿ ಆವರಣದಲ್ಲಿ ಮಾಸಿಕ ಕ್ಯಾಂಪ್ ಜರುಗಿತು. ಕೊಪ್ಪಳ ಪ್ರಾದೇಶಿಕ ಸಾರಿಗೆ ಕಚೇರಿಯ ಮೋಟಾರು ವಾಹನ ನಿರೀಕ್ಷಕರುಗಳು ಅರ್ಹತಾ ಪತ್ರ ಹಾಗೂ ತೆರಿಗೆ ಪಾವತಿಸದೇ ಇರುವಂತಹ ಶಾಲಾ ವಾಹನಗಳ ವಿರುದ್ಧ ವಿಶೇಷ ಪ್ರವರ್ತನ ಚಟುವಟಿಕೆ ಕಾರ್ಯಗಳನ್ನು ನಡೆಸಿ, ಗಂಗಾವತಿ ಮತ್ತು ಕಾರಟಗಿ ತಾಲೂಕುಗಳು ಸೇರಿದಂತೆ ಒಟ್ಟು 33 ಶಾಲೆಗಳಿಗೆ ತೆರಳಿ, ಅರ್ಹತಾ ಪತ್ರ ವಾಯಿದೆ (ಎಫ್.ಸಿ) ಮುಗಿದಿರುವ ವಾಹನಗಳಿಗೆ ಸಂಬಂಧಿಸಿದಂತೆ 111 ಅರ್ಹತಾ ಪತ್ರ(ಎಫ್.ಸಿ.)ನೋಟಿಸ್‌ಗಳನ್ನು ಹಾಗೂ ತೆರಿಗೆ ವಾಯಿದೆ (ಟ್ಯಾಕ್ಸ್) ಮುಗಿದಿರುವ ವಾಹನಗಳಿಗೆ ಸಂಬಂದಿಸಿದಂತೆ 87 ತೆರಿಗೆ ತಗಾದೆ ನೋಟಿಸ್‌ಗಳನ್ನು ಜಾರಿಗೊಳಿಸಿ ಒಟ್ಟು 198 ವಾಹನಗಳ ಶಾಲಾ ಸಂಸ್ಥೆಯ ಮುಖ್ಯಸ್ಥರಿಂದ ಸ್ವೀಕೃತಿಯನ್ನು ಪಡೆಯಲಾಗಿದೆ.



ಕೊಪ್ಪಳ ಪ್ರಾದೇಶಿಕ ಸಾರಿಗೆ ಅಧಿಕಾರಿ ಕೆ.ದಾಮೋದರ್ ಅವರನೇತೃತ್ವದಲ್ಲಿ ಬುಧವಾರ ನಡೆದ ಗಂಗಾವತಿ ಕ್ಯಾಂಪ್‌ನಲ್ಲಿ 16 ಶಾಲಾ ವಾಹನಗಳ ಅರ್ಹತಾ ಪತ್ರಗಳನ್ನು ಕಚೇರಿಯ ಪ್ರತರ್ವನ ಸಿಬ್ಬಂದಿಯವರಾದ ಹಿರಿಯ ಮೋಟಾರು ವಾಹನ ನಿರೀಕ್ಷಕ ಜಿ.ಎಂ.ಸುರೇಶ ಅವರುತಪಾಸಣೆಮಾಡಿ,ಅರ್ಹತಾಪತ್ರಗಳನ್ನು ನವೀಕರಣ ಮಾಡಿರುತ್ತಾರೆ.

ಇನ್ನೂ ಜಿಲ್ಲೆಯ ಬಾಕಿ ತಾಲೂಕುಗಳಾದ ಕುಷ್ಟಗಿ, ಯಲಬುರ್ಗಾ, ಕನಕಗಿರಿ, ಕುಕನೂರ ಹಾಗೂ ಕೊಪ್ಪಳ ತಾಲೂಕಿನ ಎಲ್ಲಾ ಶಾಲಾ ವಾಹನಗಳ ಮುಖ್ಯಸ್ಥರು ತಮ್ಮ ಸಂಸ್ಥೆ ಅಥವಾ ಶಾಲೆಗೆ ಸಂಬಂಧಿಸಿದ ಶಾಲಾ ವಾಹನಗಳ ತೆರಿಗೆ ಬಾಕಿ ಇದ್ದಲ್ಲಿ ಕೂಡಲೇ ತೆರಿಗೆ ಪಾವತಿಸಿ, ಅರ್ಹತಾ ಪತ್ರನವೀಕರಿಸಿಕೊಳ್ಳಬೇಕು. ತಪ್ಪಿದಲ್ಲಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು. ಶಾಲಾ ವಾಹನಗಳಲ್ಲಿ ಶಾಲಾ ಮಕ್ಕಳು ಅಥವಾ ಶಾಲೆಯ ಸಿಬ್ಬಂದಿಯವರನ್ನು ಕರೆದುಕೊಂಡು ಹೋಗುತ್ತಿರುವುದರಿಂದ ಅಪಘಾತಗಳು ಸಂಭವಿಸಿದಲ್ಲಿ ಶಾಲೆ ಅಥವಾ ಸಂಸ್ಥೆಯ ಮುಖ್ಯಸ್ಥರೇ ನೇರ ಹೊಣೆಗಾರರಾಗಿರುತ್ತಾರೆ. ಆದ್ದರಿಂದ ವಾಹನಗಳ ದಾಖಲಾತಿಗಳಾದ ಆರ್.ಸಿ. ಕಾರ್ಡ, ಇನ್ಸೂರೇನ್ಸ್, ರಹದಾರಿ (ಪರ್ಮಿಟ್), ತೆರಿಗೆ, ವಾಯು ಮಾಲಿನ್ಯ ಪ್ರಮಾಣ ಪತ್ರ, ಅರ್ಹತಾ ಪತ್ರಗಳನ್ನು ಅಪ್‌ಡೇಟ್ (update)ನಲ್ಲಿ ಇಟ್ಟುಕೊಳ್ಳಬೇಕು ಎಂದು ಎಂದು ಕೊಪ್ಪಳ ಪ್ರಾದೇಶಿಕ ಸಾರಿಗೆ ಅಧಿಕಾರಿ ಕೆ.ದಾಮೋದರ್ ಅವರು ತಿಳಿಸಿದ್ದಾರೆ.

# ಜೋಡಿ ರಥೋತ್ಸವ ಪ್ರಯುಕ್ತ ಶಾಂತಿ ಸಭೆ

## ಊರಿನ ಶಾಂತಿ ಬಂಗ ಮಾಡಿದರೆ ನಿರ್ದಾಕ್ಷಿಣ್ಯ ಕ್ರಮ : ಡಿ ಎಸ್ ಪಿ ಮಲ್ಲೇಶ್ ದೊಡ್ಡಮನಿ ಎಚ್ಚರಿಕೆ

● ವಾರ್ತಾಲೋಕ ವಾರ್ತೆ

**ಮರಿಯಮ್ಮನಹಳ್ಳಿ : ಏಪ್ರಿಲ್ 1:** ಪಟ್ಟಣದಲ್ಲಿ ಏಪ್ರೀಲ್ 6ರಂದು ಜರುಗಲಿರುವ ಶ್ರೀ ಲಕ್ಷ್ಮಿ ನಾರಾಯಣಸ್ವಾಮಿಹಾಗೂಶ್ರೀಆಂಜನೇಯ ಸ್ವಾಮಿ ದೇವರ ಜೋಡಿ ರಥೋತ್ಸವ ಕುರಿತು ಪಟ್ಟಣ ಪೊಲೀಸ್ ಠಾಣೆಯಲ್ಲಿ ಕೂಡ್ಲಿಗಿ ಉಪ ವಿಭಾಗದ ಪೊಲೀಸ್ ಉಪಾಧಿಕ್ಷರಾದ ಮಲ್ಲೇಶ ದೊಡ್ಡಮನಿ ಇವರ ಅಧ್ಯಕ್ಷತೆಯಲ್ಲಿ ಭಾನುವಾರ ಶಾಂತಿ ಸಭೆ ನಡೆಯಿತು.



ಅಧ್ಯಕ್ಷತೆ ವಹಿಸಿ ಶಾಂತಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ಊರಿನ ಶಾಂತಿ ಬಂಗ ಮಾಡುವವರಿಗೆ ಯಾವುದೇ ಆಸ್ಪದ ಕೊಡುವುದಿಲ್ಲ. ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕರಗಿಸಲಾಗುವುದು. ಸಾವಿರ ಜನ ಪೊಲೀಸರನ್ನು ನಿಯೋಜನೆ ಮಾಡಿ ಜಾತ್ರೆ ಮಾಡುವುದು ಮುಖ್ಯವಲ್ಲ ಎಲ್ಲರ ಸಹಕಾರದೊಂದಿಗೆ ಶಾಂತಿಯುತವಾಗಿ ಜಾತ್ರೆ ನಡೆಯುವುದು ಮುಖ್ಯವಾಗುತ್ತದೆ. ಇಂದು ಸಿನಿಮಾ ನಟರೆ ಯುವಕರಿಗೆ ಹೀರೊ ಗಳಾಗುತ್ತಾರೆ ತಂದೆ ತಾಯಿಗಳನ್ನೇ ಮರೆತು ಬಿಡುತ್ತಾರೆ, ಸಾರ್ವಜನಿಕರಿಗೆ ಹಿಂಸೆ ಯಾಗುವಂತಹ ಪದ್ಧತಿಗಳು ಮಾಡುವುದು ಬೇಡ. ಊರಿನ ಪ್ರತಿಯೊಬ್ಬರಿಂದ ಸಹಕಾರ ಬೇಕು, ಗಲಾಟೆ ಸಂದರ್ಭ ಕಂಡು ಬಂದರೆ ಹಿರಿಯರು ಬುದ್ಧಿ ಹೇಳಿ , ಜಾತ್ರೆ ಮಾತ್ರ ಸುವ್ಯವಸ್ಥಿತವಾಗಿ ನಡೆಯಬೇಕು, ಭಾವುಟಗಳನ್ನು ಹಾಕುವುದನ್ನು ನಿಷೇದಿಸಲಾಗಿದೆ, ಜಾತ್ರೆ ನೋಡಲು ಬಂದವರು ಶಾಂತಿ ಯಿಂದ ಹೋಗುವಂತೆನಡೆದುಕೊಳ್ಳಬೇಕು.ಯಾರೇ ಆಗಲಿ ಕಾನೂನು ಸುವ್ಯವಸ್ಥೆಗೆ ದಕ್ಕೆ ತಂದರೆ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದುಎಂದುಎಚ್ಚರಿಕೆಕೊಟ್ಟರು.

ವಿಕಾಸ್‌ಲಮಾಣಿಸಿ.ಪಿ.ಐಹಗರಿಬೊಮ್ಮನಹಳ್ಳಿ ವೃತ್ತ, ಮಾತನಾಡಿ ಈ ಹೊಸ ಜೋಡಿ ತೇರುಗಳನ್ನು ನೋಡಲು ಬಂದವರನ್ನು ಶಾಂತಿಯಿಂದ ಕಳುಹಿಸಿ ಕೊಡಬೇಕು, ಎಲ್ಲರೂ ಪೊಲೀಸ್ ಇಲಾಖೆಗೆ ಸಹಕಾರ ಕೊಡಿ. ಸಂಗೀತ ಕಾರ್ಯಕ್ರಮ ಮಾಡಲು ವೇದಿಕೆ ಎಲ್ಲಿ ಹಾಕಬೇಕೆಂದು ಹಿರಿಯರು ಮತ್ತು ಮುಖ್ಯಧಿಕಾರಿ ಗಳೊಂದಿಗೆ ಚರ್ಚಿಸಿ ತೀರ್ಮಾನಿಸಲಾಗುವುದು. ಸಣ್ಣ ಪುಟ್ಟ ಗಲಾಟೆಗಳನ್ನು ತಡೆಯುವಂತಹ ಕೆಲಸ ಮಾಡೋಣ. ಸನ್ನೆ ಹಾಕುವ ಸಂಧರ್ಭ ಒಳ್ಳೆ ಉದ್ದೇಶಕ್ಕೆ ಇರಲಿ. ಕುಸ್ತಿಗೆ ಆಡಿಸಲಿಕ್ಕೆ ಅನುಮತಿಗಾಗಿ ಮನವಿ ಬಂದಿದ್ದು ಅದಕ್ಕೆ ಹಲವಾರು ನಿಯಮಗಳಿವೆ ಅವುಗಳಿಗೆ ಬದ್ಧರಾಗಿದ್ದರೆ ಮಾತ್ರ ಅವಕಾಶಕೊಡಲಾಗುವುದು. ಪಿಕ್ ಪಾಕೆಟ್, ಚೈನ್ ಚೈನ್ ಸ್ನಾಕರ್ಸ್ ಬಗ್ಗೆ ನಿಗಾ ವಹಿಸಲಾಗುವುದು. ಶಾಂತಿ ಸುವ್ಯವಸ್ಥೆ ಕಾಪಾಡಲು ಎಲ್ಲರೂ ಸಹಕರಿಸಿ ಎಂದು ಹೇಳಿದರು. ಪಟ್ಟಣದ ಪೊಲೀಸ್ ಇನ್ಸ್ಪೆಕ್ಟರ್ ಮೌನೇಶ್ ರಾಥೋಡ್ ಪ್ರಾಸ್ತಾವಿಕವಾಗಿ ಮಾತನಾಡಿ ತೇರು ಎಳೆಯುವ ದಿನ ಮಧ್ಯಾಹ್ನ 2ಗಂಟೆಯಿಂದ ವಾಹನಗಳನ್ನು ಇಂಡಿಯನ್ ಪೆಟ್ರೋಲ್ ಬಂಕ್ ಹೈವೇ ಯಿಂದ ದೇವಲಾಪುರಕ್ಕೆ ಮಾರ್ಗ ಬದಲಾಯಿಸಲಾಗುವು. ಜಾತ್ರಾ ಸಂಧರ್ಭದಲ್ಲಿ ಯುವಕರು ಪಿಪಿಯಿಂದ ಮಾಡುವ ಶಬ್ದದಿಂದ ಸಾರ್ವಜನಿಕರಿಗೆ ಕಿರಿ ಕಿರಿಯಾಗಿದ್ದು ಗಮನಕ್ಕೆ ಬಂದಿತ್ತು ಹಾಗಾಗಿ ಹಿಂದಿನವರ್ಷ ಪಿಪಿ ಬ್ಯಾನ್ ಮಾಡಲಾಗಿತ್ತು. ಈ ವರ್ಷವೂ ಪಿಪಿ ಬ್ಯಾನ್ ಮಾಡಲಾಗುವು, ಜಾತ್ರೆಯಲ್ಲಿ ಕಿಚ್ಚಾ , ಅಪ್ಪು ಬಾಯ್ಸ್ ರಂತ ನಟರ ದ್ವಜಗಳು ಮತ್ತು 07,08,05, ನಂತಹ ಯಾವುದೇ ಬಾವುಟಗಳನ್ನು ತರುವುದಕ್ಕೆ ಅವಕಾಶವಿರುವುದಿಲ್ಲ, ವೃತ್ತಕ್ಕೆ ಕಟ್ಟುವಂತಿಲ್ಲ. ತೇರಿನ ಗಾಲಿಗೆ ಕಾಯಿ ಹೊಡೆಯುವಂತಿಲ್ಲ, ಸನ್ನೆ ಹಾಕುವವರು ಸೆಡ್ಡು ಹೊಡೆದು ಇತರರನ್ನು ಕೆರಳೆಸುವಂತಿಲ್ಲ, ಹಿರಿಯರು ತಮ್ಮ ತಮ್ಮ ಏರಿಯಾಗಳಲ್ಲಿ ಯುವಕರಿಗೆ ಜಾತ್ರಾ ಸಮಯದಲ್ಲಿ ಅಶಾಂತಿ ಉಂಟುಮಾಡುವ ಯಾವುದೇ ಕಾನೂನು ಬಾಹಿರ ಚಟುವಟಿಕೆಗಳನ್ನು ಮಾಡದಂತೆ ಬುದ್ಧಿವಾದಹೇಳಬೇಕು ಎಂದು ಹೇಳಿದರು.

ಆದಿಮನಿಹುಸೇನ್‌ಬಾಷಾಪಟ್ಟಣಪಂಚಾಯಿತಿ ಅಧ್ಯಕ್ಷರು ಮಾತನಾಡಿ ಇಷ್ಟು ದೊಡ್ಡ ಜಾತ್ರೆಗೆ ಸಾವಿರಾರು ಭಕ್ತರು ಆಗಮಿಸುತ್ತಾರೆ ಜಾತ್ರೆಯಲ್ಲಿ ಜೋಕಾಲಿ ಇಲ್ಲವೆಂದರೆ ಕಳೆನೇ ಬರುವುದಿಲ್ಲ. ಹಾಗಾಗಿ ಸಮಯದ ಅಭಾವ ಇರುವುದರಿಂದ ಜೋಕಾಲಿ ಹಾಕುವುದಕ್ಕೆ ತಹಶೀಲ್ದಾರರು ಕೂಡಲೇ ಎನ್ ಒ ಸಿ ಕೊಡಬೇಕು.25ಸಿಸಿಟಿ.ವಿವ್ಯವಸ್ಥೆಸೇರಿದಂತೆ ಪಟ್ಟಣ ಪಂಚಾಯಿತಿಯಿಂದ ಏನೇನು ಸಹಕಾರ ಬೇಕು ಸಾಧ್ಯವಾಗುವ ಎಲ್ಲವನ್ನೂ ವ್ಯವಸ್ಥೆ ಮಾಡಿಕೊಡಲಾಗುವುದು ಎಂದರು.

ಗೋವಿಂದ ಪರುಶುರಾಮ ಮುಖಂಡ ಮಾತನಾಡಿ 1ನೇತಾರೀಕಿನಂದು ಪಟ್ಟಣದಲ್ಲಿ ರಸಮಂಜರಿ ಕಾರ್ಯಕ್ರಮ ವಿರುತ್ತದೆ. ಪ್ರಸಾದ ವ್ಯವಸ್ಥೆ ಇರುತ್ತದೆ, ನೂತನ ಜೋಡಿ ರಥವಾಗಿರುವುದರಿಂದ ಜಾತ್ರೆಗೆ ಹೆಚ್ಚಿನ ಜನ ಸೇರುವ ಸಾಧ್ಯತೆಗಳಿವೆ ಹಾಗಾಗಿ ಪೊಲೀಸ್ ಇಲಾಖೆ ಹೆಚ್ಚಿನ ಸಹಕಾರ ಕೊಡಬೇಕೆಂದು ಹೇಳಿದರು.

ಮುಖಂಡ ಗುಂಡಾ ಸೋಮಣ್ಣ ಮಾತನಾಡಿ ಜಾತ್ರೆಗೆ ಸುಮಾರು 1.50ಲಕ್ಷ ಜನ ಸೇರುವ ಸಾಧ್ಯತೆ ಇದೆ , ಎಲ್ಲರ ಸಹಕಾರದೊಂದಿಗೆ ಶಾಂತಿಯುತವಾಗಿ ಜಾತ್ರೆಯನ್ನು ನೆರವೇರಿಸೋಣ, ಯುವಕರು ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶಕೊಡದೆ ತಾಳ್ಮೆಯಿಂದ ಶಾಂತಿ ಯಿಂದ ಜಾತ್ರೆ ಮಾಡೋಣ ಎಂದು ಹೇಳಿದರು.

ಸಭೆಯಲ್ಲಿ ಇತರರು ಮಾತನಾಡಿ ಜಾತ್ರಾ ಸಂಧರ್ಭದಲ್ಲಿ ಪಟ್ಟಣ ಪಂಚಾಯಿತಿಯಿಂದ ನೀರಿನ ಬವಣೆನೀಗಿಸಬೇಕು, ವಿದ್ಯುತ್‌ಅವಘಡ ಸಂಭವಿಸದಂತೆ ಕೆ.ಇ.ಬಿ ಯವರು ಕಾರ್ಯ ನಿರ್ವಹಿಸಬೇಕು, ಮೊಬೈಲ್ ಶೌಚಾಲಯ ವ್ಯವಸ್ಥೆ ಮಾಡಬೇಕು, ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಬೇಕು, ಪಟ್ಟಣ ಪಂಚಾಯಿತಿಯವರು ನೀರಿನ ಅರವಟಿಕೆಗಳ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿದರು.

ಖಾಜಾ ಮೈನುದ್ದಿನ್ ಮುಖ್ಯಧಿಕಾರಿ ಮಾತನಾಡಿ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಉತ್ಸವದ ಅಂಗವಾಗಿ ಪೂರ್ವಬಾವಿ ಸಿದ್ಧತೆಗಳ ಕುರಿತು ಸ್ವಚ್ಚತೆ, ನೀರು, ಸಿಸಿ ಕ್ಯಾಮರಾಗಳು ಸೇರಿದಂತೆ ಎಂದಿನಂತೆ ರಸ್ತೆ ಬದಿ ಚಿಕನ್ ಅಂಗಡಿಗಳು ಇಡಬಾರದೆಂದು, ಹಾಗೂ ಜಾತ್ರೆಯ ಸಂಧರ್ಭದಲ್ಲಿ ಎರೆಡು ದಿನಗಳ ಕಾಲ ಚಿಕನ್ ಅಂಗಡಿಗಳನ್ನು ತೆರೆಯಬಾರದೆಂದು ಅಂಗಡಿಗಳ ಮಾಲೀಕರಿಗೆ ನೋಟಿಸ್ ನೀಡಲಾಗಿದೆ. ತುಂಗಭದ್ರಾ ನದಿ ನೀರು ಶುದ್ದಿಕರಿಸಿ ಈ ಗಾಗಲೇ ಟ್ಯಾಂಕ್ ಗಳಿಗೆ ತುಂಬಿಸಲಾಗಿದೆ, ಟೆಸ್ಟಿಂಗ್ ವರದಿ ಗಾಗಿ ಕಾಯುತ್ತಿದ್ದೇವೆ ಅದು ಬಂದರೆ ಕೂಡಲೇ ನೀರು ಬಿಡಲಾಗುದು, ದೂಳು ನಿವಾರಿಸಲು ನೀರನ್ನು ಸಿಂಪಡಿಸಲಾಗುವುದು. 1ನೇ ತಾರೀಕಿನಿಂದ 15ದಿನಗಳ ವರೆಗೆ ಆರು ಕಡೆ ನೀರಿನ ಅರವಟಿಕೆ ಮಾಡಲಾಗುವುದು. ಬೇಸಿಗೆ ಪ್ರಯುಕ್ತ 3ಕಡೆ ನಿರಂತರ ಅರವಟಿಕೆ ಮುಂದುವರೆಸಲಾಗುವುದು. ಜಾತ್ರಾ ಪ್ರಯುಕ್ತ ಬ್ಯಾನರ್ಸ್ ಮತ್ತು ಬಂಟಿಂಗ್ಸ್ ಗಳನ್ನು ಹಾಕಲು ಅವಕಾಶ ಇರುವುದಿಲ್ಲ. ಮೊಬೈಲ್‌ಶೌಚಾಲಯಗಳನ್ನುಅಳವಡಿಸಲು ಸದಸ್ಯರೊಂದಿಗೆ ಚರ್ಚಿಸಿ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು. ವಿದ್ಯುತ್ ಅವಘಡ ಸಂಭವಿಸಿದರೆ ತುರ್ತಾಗಿ ಸಾರ್ವಜನಿಕರು ಮರಿಯಮ್ಮನಹಳ್ಳಿ ಕೆ.ಇ.ಬಿ ಶಾಖಾಧಿಕಾರಿ ಸಂಖ್ಯೆ 9480844232ಗೆ ಕರೆ ಮೂಲಕ ಸಂಪರ್ಕಿಸಬಹುದು. ಈ ಸಂಧರ್ಭದಲ್ಲಿ ವೇದಿಕೆ ಮೇಲೆ ಪಟ್ಟಣ ಪೊಲೀಸ್ ಠಾಣೆಯ ಬಿಬಿ ಮರೆಮ್, ಪಿ ಎಸ್ ಐ , ಶ್ರೀಧರ ಉಪ ತಹಶೀಲ್ದಾರ್ ಮರಿಯಮ್ಮನಹಳ್ಳಿ, ಕೆ ಇ ಬಿ ವೆಂಕಟೇಶ್, ಸೇರಿ ಊರಿನ ಮುಖಂಡರಾದ ಉದ್ರೇಕಲ್ ವೆಂಕಟೇಶ್,ಬುಡೆನ್‌ಸಾಬ್,ವಿಶ್ವನಾಥ್‌ಶೆಟ್ಟಿ ,ಹುಲುಗಪ್ಪ, ಸದಸ್ಯರು ಸೇರಿದಂತೆ ಇತರರು ಸಭೆಯಲ್ಲಿ ಭಾಗವಹಿಸಿದ್ದರು.

**ವರದಿ ಲಕ್ಕಿಮರದ ಮಂಜುನಾಥ**

# ಶರಣಬಸವ ರಾಜ್ಯ ಪ್ರಶಸ್ತಿ ವಿಜೇತ ಡಾ. ಬಿ. ಎನ್. ಬಾಗಲಕೋಟರಿಗೆ ಸನ್ಮಾನ



**ರಬಕವಿ:** ಪ್ರಶಸ್ತಿಗಳು ನಮ್ಮ ಸಾಮಾಜಿಕ ಬದ್ಧತೆಯನ್ನು ಹೆಚ್ಚಿಸುವ ಮೂಲಕ ನಮಗೆ ಇನ್ನಷ್ಟು ಪ್ರಾಮಾಣಿಕ ಸೇವೆ ಮಾಡಲು ಪ್ರೇರೇಪಿಸುತ್ತವೆಂದು ರಬಕವಿಯ ಹಿರಿಯ ವೈದ್ಯ ಡಾ. ಬಿ. ಎನ್. ಬಾಗಲಕೋಟ ನುಡಿದರು.

ಮಾರ್ಚ್ 29 ರಂದು ರಬಕವಿಯ ದಾನಮ್ಮದೇವಿ ದೇವಸ್ಥಾನದಲ್ಲಿ ಡಿ. ಕೆ. ಕೊಟ್ರಶೆಟ್ಟಿ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಡಾ. ಬಾಗಲಕೋಟ, ಸೇವೆಯಲ್ಲಿ ಸಿಗುವ ಅನುಪಮ ಸಾರ್ಥಕತೆಯ ಮುಂದೆ ಯಾವುದೂ ಹೆಚ್ಚಿನದಲ್ಲವೆಂದರು. ಇದೇ ಸಂದರ್ಭದಲ್ಲಿ ಕಿತ್ತೂರು ಚೆನ್ನಮ್ಮ ಪ್ರಶಸ್ತಿ ವಿಜೇತೆ ರಜನಿ ಶೇಠೆ, ದೇವಸ್ಥಾನ ಟ್ರಸ್ಟ್

ಅಧ್ಯಕ್ಷ ಶಿವಜಾತ ಜಿ. ಉಮದಿ, ಅನ್ನ ದಾಸೋಹದ ಅಡುಗೆ ತಯಾರಕ ಬಾಲಚಂದ್ರ ಅಂಬಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು. ಫೌಂಡೇಶನ್ ಅಧ್ಯಕ್ಷ ಸೋಮಶೇಖರ ದುಂಡಪ್ಪ ಕೊಟ್ರಶೆಟ್ಟಿ, ಚಂದ್ರಶೇಖರ ಹುಲಗಬಾಳಿ, ಗಿರೀಶ ಎಂ. ಮುತ್ತೂರ, ಶಿವಾನಂದ ದಾಶ್ಯಾಳ, ಸಂಜಯ ತೇಲಿ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಸಾಮೂಹಿಕ ವಿವಾಹಗಳಿಂದ ಬಡವರಿಗೆ ಅನುಕೂಲ: ಪಟ್ಟಣಶೆಟ್ಟಿ

**ಬಾದಾಮಿ :** ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಸಾಮೂಹಿಕ ವಿವಾಹಗಳಿಂದ ಬಡವರಿಗೆ ಅನುಕೂಲವಾಗುತ್ತವೆ ಎಂದು ಮಾಜಿ ಶಾಸಕ ಎಂ.ಕೆ.ಪಟ್ಟಣಶೆಟ್ಟಿ ಹೇಳಿದರು.




ಅವರು ರವಿವಾರ ತಾಲೂಕಿನ ಮುತ್ತಲಗೇರಿ ಗ್ರಾಮದ ನಾಯಕಪ್ಪಜ್ಜನ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪರಮ ಪೂಜ್ಯ ಶ್ರೀ ಡಾ. ಪ್ರಸನ್ನಾನಂದ ಪುರಿ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪಿಕಾರ್ಡ ಬ್ಯಾಂಕ್ ಅಧ್ಯಕ್ಷ ಮಹಾಂತೇಶ ಮಮದಾಪೂರ, ಜಿಲ್ಲಾ ಬಿಜೆಪಿ ಅಧ್ಯಕ್ಷ ಶಾಂತಗೌಡ ಪಾಟೀಲ, ಮಾಜಿ ಜಿ.ಪಂ. ಉಪಾಧ್ಯಕ್ಷ ಹನಮಂತ ಮಾವಿನಮರದ, ಮಾಜಿ ಜಿ.ಪಂ.ಸದಸ್ಯ ಎಸ್.ಡಿ.ಜೋಗಿನ, ಮಹಾಂತೇಶ ಹಟ್ಟಿ, ಮುಖಂಡರಾದ ರಾಮಣ್ಣ ನೋಟಗಾರ, ಚಂದಪ್ಪಗೌಡ ಗೌಡರ, ಈಶ್ವರ ಚೆನ್ನಿ, ಬಸವರಾಜ ತಳವಾರ, ಕನಕಪ್ಪ ಪರಸನ್ನವರ, ಹುಚ್ಚಪ್ಪ ಹದ್ದನ್ನವರ, ಸೇರಿದಂತೆ ಇತರರು ಹಾಜರಿದ್ದರು. ಬಿ.ಟಿ.ಹಳ್ಳಿ ಕಾರ್ಯಕ್ರಮವನ್ನು ನಿರೂಪಣೆ ಮಾಡಿದರು. ಪ್ರಕಾಶ ನಾಯ್ಕರ ಸ್ವಾಗತಿಸಿ, ಕೊನೆಯಲ್ಲಿ ವಂದಿಸಿದರು.

13 ಜೋಡಿ ವಿವಾಹ; ಇದೇ ಸಂದರ್ಭದಲ್ಲಿ 13 ಜೋಡಿ ನವದಂಪತಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಗಣ್ಯರು ಸಾಮೂಹಿಕ ವಿವಾಹದಲ್ಲಿ ಭಾಗವಹಿಸಿ, ನವದಂಪತಿಗಳಿಗೆ ಶುಭ ಕೋರಿದರು.

VARTHA LOKA Kannada Daily Morning News Paper Printed at NIKHIL OFFSET PRINTES Ward No. 23, Buddha Circle, Hosalli Main Road, GANGAVATHI-583227. Dist: Koppal,
Editor & Published by Mohammed jeelan. G., Rajasab Compound, Opp. Kulayappa Building, 1st Cross, Patel Nagar, HOSPET Dist : Vijaynagar, Mob. No.: 9482156289 E-Mail: Varthalokahpt@gmail.com